ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 37 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21–08–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 37 | Title- Code: KARKAN 28269 | Chitradurga | Date: 21-08-2024 Wednesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಸಾಮಾನ್ಯರಿಂದ ಅಸಾಮಾನ್ಯಕ್ಕೇರಿದವರು ಬ್ರಹ್ಮಶ್ರೀ ನಾರಾಯಣ ಗುರುಗಳು: ಎಡಿಸಿ 2
ಕಾಂಗ್ರೆಸ್ಸಿಗರಿಂದ ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಹೇಳಿಕೆ: ಬಿಜೆಪಿ ದೂರು 3
ಉಳುವವನಿಗೆ ಭೂ ಒಡೆತನ ನೀಡಿದ ಮಹಾನ್ ನಾಯಕ ಅರಸು 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ರಾಷ್ಟ್ರ ಕಂಡ ಅಪ್ರತಿಮ ಮುತ್ಸದ್ದಿ ರಾಜಕಾರಣಿ ದೇವರಾಜ ಅರಸು: ಸಚಿವ ಡಿ.ಸುಧಾಕರ್





» ಚಿತ್ರದುರ್ಗ

ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರು ರಾಷ್ಟ್ರ ಕಂಡ ಅಪ್ರತಿಮ ಮುತ್ಸದ್ದಿ ರಾಜಕಾರಣಿಯಾಗಿದ್ದರು ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಬಣ್ಣಿಸಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ,ಮಾಜಿಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇವರಾಜ ಅರಸು ಅವರು ಜ್ಯಾತ್ಯತೀತ ಹಾಗೂ ಸಾಮಾಜಿಕ ನ್ಯಾಯ ತತ್ವದಲ್ಲಿ ನಂಬಿಕೆ ಇಟ್ಟಿದ್ದರು. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸಿ ಕೊಡಲು ಹೋರಾಡಿದರು. ರಾಜ್ಯದ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಅರಸು ಅವರು ಜಾರಿಗೆ ತಂದ ಯೋಜನೆಗಳ ಫಲವನ್ನು ನಾವೆಲ್ಲರೂ ಇಂದಿಗೂ ಅನುಭವಿಸುತ್ತಿದ್ದೇವೆ ಎಂದರು.

ದೇವರಾಜ ಅರಸು ತಂದ ಸುಧಾರಣೆಗಳಿಂದಾಗಿಯೇ, ರಾಜ್ಯದ ಹಿಂದುಳಿದ ವರ್ಗಗಳು ಸಾಮಾಜಿಕವಾಗಿ ಅಭಿವೃದ್ಧಿ ಹೊಂದಿದ್ದಾರೆ. ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ದೇವರಾಜ ಅರಸು ಅವರ ಮಾರ್ಗದಲ್ಲಿಯೇ ಸಾಗಿ, ಸಮಾಜದ ಕಟ್ಟ ಕಡೆಯ ವ್ಯಕ್ತಿಗಳಿಗೂ ನ್ಯಾಯ ದೊರಕಿಸಿ ಕೊಡಲು ಕಂಕಣ ಬದ್ದರಾಗಿದ್ದಾರೆ ಎಂದು ಹೇಳಿದರು.

ಸ್ವತಃ ಬಡ ಕುಟುಂಬದಲ್ಲಿ ಜನಿಸಿದ ದೇವರಾಜ ಅರಸು ತಮ್ಮ ಸ್ವಂತ ಪರಿಶ್ರಮದಿಂದ ಎಲ್ಲವನ್ನು ಮೆಟ್ಟಿ ನಿಂತು ಜೀವನದಲ್ಲಿ ಮುಂದೆ ಬಂದರು. ಅರಸು ಎನ್ನುವ ಸಣ್ಣ ಸಮುದಾಯದಲ್ಲಿ ಜನಿಸಿದ ಅವರಿಗೆ ಯಾವುದೇ ಪ್ರಬಲ ಜಾತಿಗಳ ಬೆಂಬಲವಿರಲಿಲ್ಲ. ಆದರೂ ಎಲ್ಲಾ ಜಾತಿ ಜನರ ಪ್ರೀತಿ ವಿಶ್ವಾಸಗಳಿಸಿ, ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಗಳಾದರು. ಭೂ ಸುಧಾರಣೆ ಕಾಯ್ದೆ ಜಾರಿಗೆ ತಂದು ಲಕ್ಷಾಂತರ ಭೂ ರಹಿತ ಜನರಿಗೆ ಭೂ ಒಡೆತನ ಲಭಿಸುವಂತೆ ಮಾಡಿದರು. ಹಾವನೂರು ವರದಿ ಜಾರಿ ಮಾಡಿ, ಹಿಂದುಳಿದ ವರ್ಗಗಳಿಗೆ ಮೀಸಲಾತಿ ಕಲ್ಪಿಸಿದರು. 1973 ರಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿದ ಹೆಗ್ಗಳಿಕೆ ಅವರದು ಎಂದು ತಿಳಿಸಿದರು.

ಇಂದು ದೇವರಾಜು ಅರಸು ಜನ್ಮ ದಿನ ಮಾತ್ರವಲ್ಲದೆ ಬ್ರಹ್ಮಶ್ರೀ ನಾರಾಯಣ ಗುರು ಹಾಗೂ ಮಾಜಿ ಪ್ರಧಾನ ಮಂತ್ರಿ ರಾಜೀವ್ ಗಾಂಧಿಯವರ ಜನ್ಮದಿನವೂ ಆಗಿದೆ. ವಿದ್ಯಾರ್ಥಿಗಳು ಈ ಎಲ್ಲಾ ಮಹನೀಯರ ಕುರಿತಾದ ಪುಸ್ತಕಗಳನ್ನು ಓದಿ, ಅವರ ಕೊಡುಗೆಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ,ರಾಜ್ಯದ ಹಿಂದುಳಿದ ವರ್ಗಗಳು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಮುನ್ನಲೆಗೆ ಬರಲು ದೇವರಾಜು ಅರಸು ಕಾರಣ. ಶಿವರಾಮ ಕಾರಂತರ ಚೋಮನದುಡಿ ಕಾದಂಬರಿಯಲ್ಲಿ ಚೋಮ ಕಡೆಯವರೆಗೂ ಭೂ ರಹಿತನಾಗಿಯೇ ಉಳಿಯುತ್ತಾನೆ. ಆದರೆ ರಾಜ್ಯದಲ್ಲಿ ಉಳುವವನೇ ಭೂ ಒಡೆಯ ಎನ್ನುವುದನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿದ ದೇವರಾಜು ಅರಸು ಅವರು ಲಕ್ಷಾಂತರ ಭೂ ರಹಿತ ಕೃಷಿ ಕಾರ್ಮಿಕರ ಪಾಲಿನ ವಿಮೋಚಕರಾಗಿ, ಭೂ ಒಡೆತನದ ಹಕ್ಕು ಕಲ್ಪಿಸಿದರು ಎಂದರು.

ಶಿವಮೊಗ್ಗದ ಸಹ್ಯಾದ್ರಿ ಕಲಾ ಕಾಲೇಜಿನ ಕನ್ನಡ ಪ್ರಾಧ್ಯಪಕ ಡಾ.ಮೋಹನ್ ಚಂದ್ರಗುತ್ತಿ ಉಪನ್ಯಾಸ ನೀಡಿ, ಡಿ.ದೇವರಾಜ ಅರಸು ಮೌನಕ್ರಾಂತಿ ಹರಿಕಾರ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್‌ಗಳನ್ನು ತೆರೆದರು. ರಾಜ್ಯದಲ್ಲಿ ಮಲ ಹೊರುವ ಪದ್ಧತಿಯನ್ನು ನಿಷೇಧಿಸಿದರು. ಅರಸು ಅವರು ತಂದ ಭೂ ಸುಧಾರಣೆ ಫಲವಾಗಿ ರಾಜ್ಯದ 4.85 ಲಕ್ಷ ಭೂ ಗೇಣಿದಾರರು ಭೂ ಮಾಲೀಕರಾಗಿ ಬದಲಾದರು ಎಂದರು.

ಭೂ ರಹಿತರಿಗೆ ಹಂಚಿದ ಜಮೀನುಗಳ ರಕ್ಷಣೆಗಾಗಿ ಭೂ ನ್ಯಾಯಮಂಡಳಿಗಳನ್ನು ಸ್ಥಾಪಿಸಿದರು. ಡಾ.ಎಲ್.ಜಿ.ಹಾವನೂರು ವರದಿ ಅನುಷ್ಠಾನ ಮಾಡಿ, ಹಿಂದುಳಿದ ವರ್ಗದವರಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿದರು. ಜೀತ ಮುಕ್ತ ಕಾನೂನು ಜಾರಿಗೆ ತಂದು ಜೀತ ಪದ್ಧತಿಯನ್ನು ತೊಡೆದು ಹಾಕಿದರು.

ವಿದ್ಯಾರ್ಥಿಗಳಿಗೆ ರಿಯಾಯಿತಿ ದರದ ಬಸ್ ಪಾಸ್, ನ್ಯಾಯಬೆಲೆ ಅಂಗಡಿಗಳ ಸ್ಥಾಪನೆಗಳು ಸಹ ದೇವರಾಜು ಅರಸು ಅವರ ಕೊಡುಗೆಗಳಾಗಿವೆ. ಶುದ್ಧ ಹಸ್ತ ರಾಜಕಾರಣಿಯಾಗಿದ್ದ ದೇವರಾಜ ಅರಸು, ಅಧಿಕಾರವನ್ನು ದುರಪಯೋಗ ಪಡಿಸಿಕೊಂಡು ಹಣ ಸಂಪಾದಿಸಲಿಲ್ಲ. ಅವರು ತೀರಿಹೋದ ಸಂದರ್ಭದಲ್ಲಿ ಆಸ್ಪತ್ರೆಯ ಬಿಲ್ ಸಹಿತ ಪಾವತಿ ಮಾಡಲು ಕುಟುಂಬ ವರ್ಗದವರಲ್ಲಿ ಹಣ ಇರಲಿಲ್ಲ. ಅಂದಿನ ಸರ್ಕಾರ ಅವರ ಆಸ್ಪತ್ರೆಯ ಬಿಲ್ ಪಾವತಿಗೆ ಹಾಗೂ ಅಂತಿಮ ಸಂಸ್ಕಾರ ನೆರವೇರಿಸಲು ಸಹಾಯ ನೀಡಿತು ಎಂದರು.ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿ.ಪಂ.ಉಪಕಾರ್ಯದರ್ಶಿ ತಿಮ್ಮಪ್ಪ, ಗ್ಯಾರಂಟಿ ಯೋಜನೆ ಅನುಷ್ಠಾನದ ಜಿಲ್ಲಾ ಸಮಿತಿ ಅಧ್ಯಕ್ಷ ಶಿವಣ್ಣ, ಆಹಾರ ಇಲಾಖೆ ಜಂಟಿ ನಿರ್ದೇಶಕ ಕೆ.ಸಿ.ಮಧುಸೂಧನ್, ಡಿವೈಎಸ್‌ಪಿ ದಿನಕರ್ ಸೇರಿದಂತೆ ಮತ್ತಿತರರು ಇದ್ದರು.

### ಕುಣಿದು ಕುಪ್ಪಳಿಸಿದ ವಿದ್ಯಾರ್ಥಿಗಳು

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ದೇವರಾಜು ಅರಸು ಭಾವಚಿತ್ರದ ಅದ್ದೂರಿ ಮೆರವಣಿಗೆ ನಡೆಸಲಾಯಿತು. ನಗರದ ನೀಲಕಂಠೇಶ್ವರ ದೇವಸ್ಥಾನದ ಬಳಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ.ಆರ್.ಸುಬ್ರಾನಾಯಕ್ ಮೆರವಣಿಗೆಗೆ ಚಾಲನೆ ನೀಡಿದರು. ನಗರದ ದೇವರಾಜು ಅರಸು ಹಿಂದುಳಿದ ವಿದ್ಯಾರ್ಥಿನಿಲಯಗಳಿಂದ ಆಗಮಿಸಿದ ಸಾವಿರಾರು ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡು ಕುಣಿದು ಕುಪ್ಪಳಿಸಿದರು. ಮೆರಣಿಗೆ ಗಾಂಧಿ ವೃತ್ತ, ಎಸ್.ಬಿ.ಐ ವೃತ್ತ, ಅಂಬೇಡ್ಕರ್ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಿತು.

## ಫಾಸ್ಟ್ ನ್ಯೂಸ್

### ನಾಗಪುರ ದೀಕ್ಷಾ ಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಮುಂಬರುವ ಅಕ್ಟೋಬರ್ 12 ತಾರೀಕಿನ ಶನಿವಾರದ ವಿಜಯದಶಮಿ ದಿನದಂದು ಮಹಾರಾಷ್ಟ್ರದ ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ತೆರಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 15 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಪ್ರತಿ ವರ್ಷದಂತೆ ಅಕ್ಟೋಬರ್ 10 ರಿಂದ 14ರವರೆಗೆ ನಾಗಪುರ ದೀಕ್ಷಾಭೂಮಿ ಯಾತ್ರೆಗೆ ತೆರಳಲು ಸಾರಿಗೆ ವ್ಯವಸ್ಥೆ, ರೈಲಿನ ವ್ಯವಸ್ಥೆ ಕಲ್ಪಿಸುವ ಸಂಬಂದ, ರಾಜ್ಯದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಆಯ್ಕೆ ಮಾಡಲಾಗುವುದು. ಯಾತ್ರಿಗಳು ಬಿ.ಪಿ.ಎಲ್.ಕಾರ್ಡ ಹೊಂದಿರಬೇಕು. ಎಸ್.ಟಿ, ಎಸ್.ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಇತರೆ ಸಮುದಾಯದ ಜನರು ಬಾಬಾ ಸಾಹೇಬ್ ಅಂಬೇಡ್ಕರ್ ಅನುಯಾಯಿಗಳು ಅಹ ಯಾತ್ರೆ ಕೈಗೊಳ್ಳಬಹುದು. ಯಾತ್ರಾತ್ರಿಗಳು ಕನಿಷ್ಠ 18 ವರ್ಷ ಮೇಲ್ಪಟವರಾಗಿರಬೇಕು. ಡಾ.ಬಿ.ಆರ್. ಅಂಬೇಡ್ಕರ್ ರವರ ಚಿಂತನೆಗಳ ಬಗ್ಗೆ ಅರಿವು ಹೊಂದಿದ್ದು, ಸಮಾಜ ಸೇವೆ ಮಾಡಿದ ಅನುಭವ ಹೊಂದಿರಬೇಕು. ಈಗಾಗಲೇ ಸರ್ಕಾರದ ವೆಚ್ಚದಲ್ಲಿ ಒಮ್ಮೆ ನಾಗಪುರ ದೀಕ್ಷಾ ಭೂಮಿಗೆ ಪ್ರವಾಸ ಮಾಡಿದವರು ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ. ಸರ್ಕಾರಿ ಮತ್ತು ಅದರ ಅಂಗಸಂಸ್ಥೆಗಳಲ್ಲಿ ಸೇವೆಯಲ್ಲಿರುವವರು ಅರ್ಹರಲ್ಲ. ರಾಜ್ಯದಲ್ಲಿ ಆಯಾ ಜಿಲ್ಲೆಗಳಿಂದಲೇ ನಾಗಪುರಕ್ಕೆ ಹೋಗಿ ಬರಲು ತಗಲುವ ಪ್ರಯಾಣದ ವೆಚ್ಚವನ್ನು ಮಾತ್ರ ಸರ್ಕಾರದಿಂದ ಭರಿಸಲಾಗುವುದು. ವಸತಿ ಮತ್ತು ಭೋಜನಾ ವೆಚ್ಚವನ್ನು ಯಾತ್ರಾರ್ಥಿಗಳೇ ಭರಿಸತಕ್ಕದ್ದು. ಆಸಕ್ತ ಯಾತ್ರಾರ್ಥಿಗಳು https://swdservice.karnataka.gov.in ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು.

### ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಅರ್ಜಿ

▪ ಚಿತ್ರದುರ್ಗ

ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದಿಂದ ಮುಂದುವರೆಯುತ್ತಿರುವ ಯೋಜನೆಗಳ ಅಡಿ 2024–25ನೇ ಸಾಲಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ, ಮತೀಯ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಸಾಲ ಸೌಲಭ್ಯ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 17 ರಿಂದ ಅರ್ಜಿ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗಿದ್ದು, ಅಕ್ಟೋಬರ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸಿಇಟಿ ಹಾಗೂ ನೀಟ್ ಮುಖಾಂತರ ಪದವಿ ಮತ್ತು ವೃತ್ತಿಪರ ಕೋರ್ಸುಗಳಾದ ಎಂ.ಬಿ.ಬಿಎಸ್, ಎಂ.ಡಿ, ಎಂ.ಎಸ್, ಬಿ.ಇ, ಬಿ.ಟೆಕ್, ಎಂ.ಇ, ಎಂಟೆಕ್, ಬಿ.ಡಿ.ಎಸ್, ಬಿ.ಆಯುಷ್, ಎಂ.ಆಯುಷ್, ಬಿ.ಆರ್ಕ್, ಎಂ.ಆರ್ಕ್, ಎಂಬಿಎ, ಎಂಸಿಎ, ಎಲ್.ಎಲ್.ಬಿ, ಬಿಎಸ್ಸಿ ಇನ್ ಹಾರ್ಟಿಕಲ್ಚರ್, ಇಂಜಿನಿಯರಿಂಗ್, ಡೈರಿ ಟೆಕ್ನಾಲಜಿ, ಫಾರೆಸ್ಟ್ರಿ, ವೆಟ್ನರಿ ಅಂಡ್ ಅನಿಮಲ್ ಟೆಕ್ನಾಲಜಿ, ಫಿರ್ಸ್, ಸೆರಿಕಲ್ಚರ್, ಹೊಮ್/ಕಮ್ಯುನಿಟಿ ಸೈನ್ಸ್, ಫುಡ್ ನರೇಷನ್ ಅಂಡ್ ಡೈಟೆಟಿಸ್, ಬಿ.ಫಾರ್ಮ, ಎಂ.ಫಾರ್ಮ ಗಳಲ್ಲಿ ಆಯ್ಕೆಯಾಗಿರುವಂತಹ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ, ಪಾರ್ಸಿ ಮತ್ತು ಆಂಗ್ಲೋ ಇಂಡಿಯನ್ ಸಮುದಾಯದ ವಿದ್ಯಾರ್ಥಿಗಳಿಗೆ ಅರಿವು ನವೀಕರಣ ಸಾಲ ಯೋಜನೆಯಡಿಯಲ್ಲಿ ಸೌಲಭ್ಯ ಒದಗಿಸಲಾಗುವುದು. ವಿದ್ಯಾರ್ಥಿಗಳು ಕೆ.ಎಂ.ಡಿ.ಸಿ ವೆಬ್‌ಸೈಟ್ kmdconline.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯೊಂದಿಗೆ ಸಂಬಂಧಿಸಿದ ದಾಖಲೆಗಳನ್ನು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194–226412, 8277944213 ಗೆ ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

# ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಸರ್ಕಾರ ವಿಶೇಷ ಯೋಜನೆ ಮೂಲಕ ಸಹಕಾರ: ಸಚಿವ

» ಚಳ್ಳಕೆರೆ

ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಹಿಂದುಳಿದ ವರ್ಗಗಳ ಅಗ್ರನಾಯಕಮುಖ್ಯಮಂತ್ರಿಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾರ್ಗದರ್ಶನದಲ್ಲಿ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಲವಾರು ಯೋಜನೆ ರೂಪಿಸಿದೆ. ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗ ಯಾವುದೇ ಸಮಸ್ಯೆ ಇಲ್ಲದೆ ಉತ್ತಮ ಬದುಕು ರೂಪಿಸಿಕೊಳ್ಳಲು ಸರ್ಕಾರ ಎರಡೂ ಸಮುದಾಯಗಳಿಗೆ ಆರ್ಥಿಕ ಶಕ್ತಿ ತುಂಬುವ ಕಾರ್ಯ ಮಾಡುತ್ತಿದೆ. ಅರಸುರವರ 109ನೇ ಜನ್ಮದಿನ ಅಂಗವಾಗಿ ಕೋಟ್ಯಾಂತರ ರೂಪಾಯಿ ವೆಚ್ಚದ ಅರಸು ಭವನ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಿದ್ಯಾರ್ಥಿ ಭವನವನ್ನು ಸಹ ಲೋಕಾರ್ಪಣೆ ಮಾಡುವ ಮೂಲಕ ಈ ವರ್ಗಗಳ ಕಲ್ಯಾಣಕ್ಕೆ ಸರ್ಕಾರ ಸಹಕಾರ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ, ಯೋಜನಾ ಮತ್ತು ಸಾಂಖಿಕ ಸಚಿವ ಡಿ.ಸುಧಾಕರ್ ತಿಳಿಸಿದರು.



ಅವರು,ಮಂಗಳವಾರಪಾವಗಡರಸ್ತೆಯ ಬಿಸಿಎಂ ಹಾಸ್ಟಲ್ ಆವರಣದಲ್ಲಿ ಎರಡೂ ಕಟ್ಟಡಗಳ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗ ಇನ್ನೂ ತಮ್ಮ ಶಕ್ತಿಯನ್ನು ಕಂಡುಕೊಳ್ಳಬೇಕಿದೆ. ಸಮಾಜದ ಎಲ್ಲಾ ಸಮುದಾಯಗಳು ಅಭಿವೃದ್ಧಿ ಪಥದತ್ತ ಹೆಜ್ಜೆ ಇಟ್ಟಿವೆ. ಈ ಎರಡೂ ಸಮುದಾಯಗಳನ್ನು ಇನ್ನೂ ಹೆಚ್ಚಿನ ಪ್ರಗತಿಗೆ ಸರ್ಕಾರ ಸಹಕಾರ ನೀಡಲಿದೆ. ಅಲ್ಪಸಂಖ್ಯಾತರು ಯಾವುದೇ ಸಮಸ್ಯೆ ಇಲ್ಲದೆ ಉತ್ತಮ ಜೀವನ ನಡೆಸುವ ವಾತಾವರಣ ಉಂಟಾಗಿದೆ. ಹಿಂದುಳಿದ ವರ್ಗದ ಜನಾಂಗವೂ ಸಹ ಸಾಕಷ್ಟು ಅಭಿವೃದ್ಧಿ ಸಾಧಿಸುವ ನಿಟ್ಟಿನಲ್ಲಿ ಹೆಜ್ಜೆ ಇಟ್ಟಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಸಮಾಜದ ನಿರ್ಲಕ್ಷ್ಯಕ್ಕೆ ಒಳಗಾದ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸರ್ಕಾರ ಬದ್ದವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರೇ ಈ ಎರಡೂ ಜನಾಂಗಗಳ ಅಭಿವೃದ್ಧಿ ಪರ ಚಿಂತನೆಗೆ ಸಹಕಾರ ನೀಡುವ ಭರವಸೆ ನೀಡಿದ್ದಾರೆ. ಪ್ರಸ್ತುತ ಸರ್ಕಾರದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳು ಬಡ ಜನರ ಹಿತಕ್ಕಾಗಿ ಸದಾ ಶ್ರಮಿಸುತ್ತಿದ್ದಾರೆ. ಜೊತೆ, ಜೊತೆಯಲ್ಲೇ ಐದು ಪ್ರಮುಖ ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ಸಮಾಜ ಬಡವರ್ಗದ ಕಲ್ಯಾಣಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸಿದೆ. ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಸರ್ಕಾರ ನೀಡುವಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಮೆಟ್ರಿಕ್ ಪೂರ್ವ ಹಾಸ್ಟಲ್ ನಿರ್ಮಾಣ ಮಾಡಿ ಸಮುದಾಯದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸರ್ಕಾರ ದೃಢ ಹೆಜ್ಜೆ ಇಟ್ಟಿದೆ ಎಂದರು.

## ಫಾಸ್ಟ್ ನ್ಯೂಸ್

### ಐಟಿಐ ಪ್ರವೇಶಾತಿಗೆ ಅರ್ಜಿ

» **ಚಿತ್ರದುರ್ಗ**

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ 2024ನೇ ಸಾಲಿಗೆ ಐಟಿಐ ಪ್ರವೇಶಾತಿ ಅರ್ಹ ಅಭ್ಯರ್ಥಿಗಳಿಂದ ಆಫ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 7 ರಿಂದ ಆಗಸ್ಟ್ 31 ರವರೆಗೆ ಅರ್ಜಿಗಳನ್ನು ಸ್ವೀಕರಿಸಿ, ಮೆರಿಟ್ ಆಧಾರದಲ್ಲಿ ಭರ್ತಿ ಮಾಡಿಕೊಳ್ಳಲಾಗುವುದು. ಅಭ್ಯರ್ಥಿಗಳು ಒಂದು ವರ್ಷಕ್ಕೆ ರೂ. 1200/- ಶುಲ್ಕ ಪಾವತಿಸಿ ಪ್ರವೇಶ ಪಡೆಯಬಹುದು. ಈ ಸಂಸ್ಥೆಯಲ್ಲಿ ಒಂದು ವರ್ಷದ ಕೂಪ ಎರಡು ವರ್ಷಗಳ ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಎಲೆಕ್ಟ್ರಿಷಿಯನ್, ಫಿಟ್ಟರ್, ಟಿಪಿಇಎಸ್, ಮೆಕ್ಯಾನಿಕ್ ಎಲೆಕ್ಟ್ರಾನಿಕ್ ವೆಹಿಕಲ್, ಅಡ್ವಾನ್ಸ್ ಸಿಎನ್‌ಸಿ ಮಷಿನಿಂಗ್ ವೃತ್ತಿಪರ ಕೋರ್ಸುಗಳು ಲಭ್ಯವಿವೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ದೂರವಾಣಿ ಸಂಖ್ಯೆ 08194-234515 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಮಹಿಳಾ ಕೈಗಾರಿಕೆ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

### 22ರಂದು ಯುವ ಜನರಿಗೆ ಕಾನೂನು ಅರಿವು

» **ಚಿತ್ರದುರ್ಗ**

ನೆಹರು ಯುವ ಕೇಂದ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಅಮೃತ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಶ್ರೀ ನೀಲಕಂಠಯ್ಯ ಮೆಮೊರಿಯಲ್ ಪದವಿ ಪೂರ್ವ ಕಾಲೇಜು ವತಿಯಿಂದ ಇದೇ ಆಗಸ್ಟ್ 22ರಂದು ಬೆಳಿಗ್ಗೆ 11 ಗಂಟೆಗೆ ನಗರದ ಅಮೃತ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ಅಂತರಾಷ್ಟ್ರೀಯ ಯುವ ದಿನಾಚರಣೆ ಮತ್ತು ಯುವ ಜನರಿಗೆ ಕಾನೂನು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕಾರ್ಯಕ್ರಮ ಉದ್ಘಾಟಿಸಿ ಉಪನ್ಯಾಸ ನೀಡುವರು. ಶ್ರೀ ನೀಲಕಂಠಯ್ಯ ಮೆಮೊರಿಯಲ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಟಿ.ದುರುಗಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್, ಅಮೃತ ಸ್ಕೂಲ್ ಆಫ್ ನರ್ಸಿಂಗ್ ಪ್ರಾಂಶುಪಾಲ ಮೊಹಮ್ಮದ್ ವಜಾಹತ್ ಉಲ್ಲಾ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಚಿತ್ರದುರ್ಗ ಜಿಲ್ಲಾ ಶಾಖೆಯ ಉಪಸಭಾಪತಿ ಈ.ಅರುಣ್ ಕುಮಾರ್, ಕಾರ್ಯದರ್ಶಿ ಎನ್.ಮಜಹರ್ ಉಲ್ಲಾ ಭಾಗವಹಿಸುವರು ಎಂದು ನೆಹರು ಯುವಕೇಂದ್ರದ ಜಿಲ್ಲಾ ಯುವಜನ ಅಧಿಕಾರಿ ಎನ್.ಸುಹಾಸ್ ತಿಳಿಸಿದ್ದಾರೆ.

### ಆಗಸ್ಟ್ 23ರಂದು ನೇರ ನೇಮಕಾತಿ ಸಂದರ್ಶನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಆಗಸ್ಟ್ 23ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ರವರೆಗೆ ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಮೇಳದಲ್ಲಿ 03ಕ್ಕೂ ಹೆಚ್ಚಿನ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಪುರುಷ, ಮಹಿಳಾ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆಮಾಡಿಕೊಳ್ಳಲಿವೆ. ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿರುವ ಅಭ್ಯರ್ಥಿಗಳು ಭಾಗವಹಿಸಬಹುದು. ಸಂದರ್ಶನಕ್ಕೆ ಆಗಮಿಸುವಾಗ 5 ಪ್ರತಿ ಬಯೋಡೇಟಾ, ವಿದ್ಯಾರ್ಹತೆ ಪ್ರಮಾಣ ಪತ್ರ ಹಾಗೂ ಪೋಟೋಗಳನ್ನು ತರಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ರಸ್ತೆ ತಿರುವಿನಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಗೆ ಭೇಟಿ ನೀಡಬಹುದು. ಕಚೇರಿ ದೂರವಾಣಿ ಸಂಖ್ಯೆ 7022459064 8105619020, 9945587060 ಗೆ ಸಂಪರ್ಕಿಸಬಹುದು.

### ಹಿಂದಿ ಅನುವಾದ ಹುದ್ದೆಗಳ ನೇಮಕಾತಿಗಾಗಿ ಅರ್ಜಿ

» **ಚಿತ್ರದುರ್ಗ**

ಸಿಬ್ಬಂದಿ ನೇಮಕಾತಿ ಆಯೋಗವು ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹಿಂದಿ ಅನುವಾದಕರ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಿದೆ. ಕಂಪ್ಯೂಟರ್ ಆಧಾರಿತವಾಗಿ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಹಿಂದಿ ಅಥವಾ ಇಂಗ್ಲೀಷ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು. ಪದವಿಯಲ್ಲಿ ಹಿಂದಿ ಅಥವಾ ಇಂಗೀಷ್ ವಿಷಯವನ್ನು ಕಡ್ಡಾಯವಾಗಿ ಓದಿರಬೇಕು. ಹಿಂದಿಯಿಂದ ಇಂಗ್ಲೀಷ್ ಭಾಷಾಂತರದಲ್ಲಿ ಡಿಪ್ಲೋಮ ಪದವಿ ಪಡೆದಿರಬೇಕು ಅಥವಾ ಭಾಷಾಂತರದಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಎರಡು ವರ್ಷ ಕಾರ್ಯ ನಿರ್ವಹಿಸಿದ ಅನುಭವ ಇರಬೇಕು. 18-30 ವರ್ಷದೊಳಗಿನ ವಯೋಮಿತಿ ನಿಗಿದಿ ಮಾಡಲಾಗಿದೆ. ಎಸ್.ಸಿ. ಎಸ್.ಟಿ, ಓಬಿಸಿ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ ಸಡಲಿಕೆ ಇರುತ್ತದೆ. ಅರ್ಜಿ ಸಲ್ಲಿಸಲು ಆಗಸ್ಟ್ 25 ಕಡೆಯ ದಿನವಾಗಿದೆ. ನೇಮಕಾತಿ ಪರೀಕ್ಷೆಯು ಅಕ್ಟೋಬರ್ ಅಥವಾ ನವೆಂಬರ್ ಮಾಹೆಯಲ್ಲಿ ಜರುಗಲಿದೆ. ಹೆಚ್ಚಿನ ಮಾಹಿತಿಗಾಗಿ www.ssckkr.kar.nic.in https://ssc.nic.in ವೆಬ್ ಸೈಟ್‌ಗೆ ಭೇಟಿ ನೀಡಬಹುದು. ನೇಮಕಾತಿ ಆಯೋಗದ ದೂರವಾಣಿ ಸಂಖ್ಯೆ 080-25502520 ಕರೆ ಮಾಡಬಹುದು.

# ಹಿಂದುಳಿದವರ ಧ್ವನಿ ದೇವರಾಜ ಅರಸು: ಸಚಿವ

» **ಚಿತ್ರದುರ್ಗ**

ರಾಜೀವ ಗಾಂಧಿಯವರು ದೇಶದಲ್ಲಿ ಅಭೀವೃದ್ಧಿ ಪೂರಕವಾದ ಯೋಜನೆಗಳನ್ನು ಹಾಗೂ ತಂತ್ರಜ್ಞಾನವನ್ನು ಜಾರಿ ಮಾಡಿದರೆ ರಾಜ್ಯದಲ್ಲಿ ದೇವರಾಜ್ ಆರಸ್‌ರವರು ಬಡತನ, ಹಿಂದುಳಿದ ವರ್ಗದವರ ಧ್ವನಿಯಾಗಿ ಕೆಲಸವನ್ನು ಮಾಡಿದ್ದಾರೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ತಿಳಿಸಿದರು.



ಚಿತ್ರದುರ್ಗ ನಗರದಲ್ಲಿ ಮಂಗಳವಾರ ಜಿಲ್ಲಾ ಕಾಂಗ್ರೆಸ್ ಕಚೇರಿಯ ಸಭಾಂಗಣದಲ್ಲಿ ಹಿಂದುಳಿದ ವರ್ಗಗಳ ವಿಭಾಗ ಮತ್ತು ರಾಜೀವಗಾಂಧಿ ಪಂಚಾಯತ್‌ರಾಜ್ ಸಂಘಟನೆವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮಾಜಿ ಪ್ರಧಾನ ಮಂತ್ರಿ ರಾಜೀವಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸ್‌ರವರು 109ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಇಬ್ಬರು ಮಹಾನೀಯರ ಭಾವಚಿತ್ರಕ್ಕೆ ಪುಷ್ಪ ನಮನಸಲ್ಲಿಸಿ ಮಾತನಾಡಿದರು.

ರಾಜೀವಗಾಂಧಿ ಮತ್ತು ದೇವರಾಜ್ ಆರಸ್ ರವರು ನಡೆದ ದಾರಿಯಲ್ಲಿ ಅವರ ತತ್ವ ಮತ್ತು ಆದರ್ಶಗಳನ್ನು ಮೈಗೂಡಿಸಿಕೊಂಡು ನಾವುಗಳು ಪ್ರಮಾಣಿಕತೆಯಿಂದ ನಡೆಯಬೇಕಿದೆ, ಅರಸು ರವರು ಎರಡು ಭಾರಿ ಮುಖ್ಯಮಂತ್ರಿಗಳಾಗಿ ಉತ್ತಮವಾದ ಆಡಳಿತವನ್ನು ನೀಡಿದ್ದಾರೆ, ಬಡವರಿಗೆ ಧ್ವನಿಯಾಗಿ ಕೆಲಸವನ್ನು ಮಾಡಿ ಅವರಿಗೆ ಉತ್ತಮವಾದ ಸ್ಥಾನಗಳನ್ನು ನೀಡಿದ್ದಾರೆ. ಮೈಸೂರನ್ನು ಕರ್ನಾಟಕ ಎಂದು ನಾಮಕರಣವನ್ನು ಮಾಡಿದ ಕೀರ್ತಿ ಅರಸುರವರಿಗೆ ಸಲ್ಲುತ್ತದೆ ಎಂದರು.

ರಾಜೀವ್ ಗಾಂಧಿ ಯುವ ರು ಪ್ರಧಾನಮಂತ್ರಿಯಾಗಿ ತಮ್ಮ ಆಡಳಿತದಲ್ಲಿ ದೇಶ ಉತ್ತಮವಾದ ಪ್ರಗತಿಯನ್ನು ಸಾಧಿಸುವಲ್ಲಿ ಪ್ರಮುಖವಾದ ಪಾತ್ರವನ್ನುವಹಿಸಿದ್ದಾರೆ, ಇಂದು ನಾವು ಬಳಸುವ ಮೊಬೈಲ್ ರಾಜೀವಗಾಂಧಿಯವರ ಕನಸಾಗಿತ್ತು ಅದನ್ನು ಅವರು ನಮ್ಮ ದೇಶಕ್ಕೆ ತರುವುದರ ಮೂಲಕ ಎಲ್ಲಾ ದೇಶಗಳಂತೆ ನಮ್ಮ ದೇಶವು ತಂತ್ರಜ್ಞಾನದಲ್ಲಿ ಪ್ರಗತಿಯನ್ನು ಸಾಧಿಸುವಲ್ಲಿ ದಾಪುಗಾಲು ಹಾಕಿತ್ತು. ಇದ್ದಲ್ಲದೆ 18 ವರ್ಷ ವಯಸ್ಸಿನವರಿಗೆ ಮತದಾನದ ಹಕ್ಕನ್ನು ನೀಡುವುದರ ಮೂಲಕ ದೇಶದ ಪ್ರಗತಿಯಲ್ಲಿ ಅವರ ಕಾಣಿಕೆ ಇರಬೇಕೆಂದು ಬಯಸಿದ್ದವರು ರಾಜೀವಗಾಂಧಿಯವರು ಎಂದ ಅವರು. ಇಬ್ಬರು ಮಹಾನೀಯರ ಚಿಂತನೆಗಳನ್ನು ನಾವುಗಳು ಸಾಧ್ಯವಾದಷ್ಟು ಮೈಗೂಡಿಸಿಕೊಳ್ಳಬೇಕಿದೆ ಎಂದು ಸುಧಾಕರ್ ಕರೆ ನೀಡಿದರು.

ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಇತರೆ ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷರಾದ ಎನ್.ಡಿ.ಕುಮಾರ್ ಮಾತನಾಡಿ, ರಾಜ್ಯದಲ್ಲಿ ಉತ್ತಮವಾಗಿ ಕೆಲಸವನ್ನು ಮಾಡುವವರ ವಿರುದ್ದ ಷಡ್ಯಂತ್ರ ನಡೆಯುತ್ತದೆ ಇದೆ ರೀತಿ ದೇವರಾಜ್ ಅರಸು ರವರ ಮೇಲೊ ಸಹಾ ಅವರ ವಿರುದ್ದ ಷಡ್ಯಂತ್ರ ನಡೆದಿದ್ದು ಇವುಗಳನ್ನು ಎಲ್ಲಾ ಮೀರಿ ಅರಸು ರವರು ಉತ್ತಮವಾದ ಆಡಳಿತವನ್ನು ನೀಡಿದರು ಈಗಲೂ ಸಹಾ ಸಿದ್ದರಾಮಯ್ಯರವರ ಮೇಲೆ ಇದೇ ರೀತಿ ವಿರೋಧ ಪಕ್ಷಗಳಿಂದ ಅವರನ್ನು ಅಧಿಕಾರದಿಂದ ಕೆಳಗೆ ಇಳಿಸಲು ಷಡ್ಯಂತ್ರ ನಡೆಯುತ್ತಿದೆ ಆದರೆ ಇದಕ್ಕೆ ಕಾಂಗ್ರೆಸ್ ಬಗ್ಗುವುದಿಲ್ಲ ಸಿದ್ದರಾಮಯ್ಯ ಪರವಾಗಿ ರಾಜ್ಯವೇ ನಿಂತಿದೆ ರಾಜ್ಯದಲ್ಲಿ ವಿವಿಧ ರೀತಿಯ ಭಾಗ್ಯಗಳನ್ನು ನೀಡುವುದರ ಮೂಲಕ ಭಾಗ್ಯಗಳ ಸರದಾರ ಎಂದು ಹೆಸರು ಮಾಡಿದ್ದಾರೆ. ಎಂದ ಅವರು ರಾಜೀವಗಾಂಧಿಯವರು ಸಹಾ ದೇಶಕ್ಕೆ ಉತ್ತಮವಾದ ಆಡಳಿತವನ್ನು ನೀಡಿದ್ದಾರೆ. ಅವರ ಕಾಲದಲ್ಲಿ ದೇಶ ತಂತ್ರಜ್ಞಾನದಲ್ಲಿ ಪ್ರಗತಿಯನ್ನು ಕಂಡಿತು ಎಂದರು.

ಅಖಿಲ ಭಾರತ ರಾಜೀವಗಾಂಧಿ ಪಂಚಾಯತ್‌ರಾಜ್ ಸಂಘಟನೆಯ ರಾಷ್ಟ್ರೀಯ ಸಂಚಾಲಕರು, ಜಿಲ್ಲಾಧ್ಯಕ್ಷರಾದ ಡಾ.ಕೆ.ಆನಂತರವರು ಮಾತನಾಡಿ, ರಾಜೀವಗಾಂಧಿಯವರು ತಮ್ಮ ಆಡಳಿತದಲ್ಲಿ ಹಲವಾರು ಯೋಜನೆಗಳನ್ನು ಜಾರಿ ಮಾಡುವುದರ ಮೂಲಕ ದೇಶದ ಪ್ರಗತಿಗೆ ತಮ್ಮದೆ ಆದ ಕೊಡುಗೆಯನ್ನು ನೀಡಿದ್ದರು. ಬೇರೆ ದೇಶಗಳಲ್ಲಿ ನಮ್ಮಮ ದೇಶವೂ ಸಹಾ ಪೈಪೋಟಿ ಮಾಡಬೇಕೆಂದು ಬಯಸಿದ್ದ ಅವರು ಬೇರೆ ದೇಶದ ತಂತ್ರಜ್ಞಾನವನ್ನು ನಮ್ಮ ದೇಶದಲ್ಲಿಯೇ ತಯಾರು ಮಾಡುವುದರ ಮೂಲಕ ದೇಶವನ್ನು ಮುನ್ನಡೆಸಿದರು. ಪಂಚಾಯತ್ ರಾಜ್ ಕಾಯ್ದೆಗೆ ತಿದ್ದುಪಡಿಯನ್ನು ತರುವುದರ ಮೂಲಕ ಹಿಂದುಳಿದ ವರ್ಗ, ಅಲ್ಪಸಂಖ್ಯಾತ ವರ್ಗದವರಿಗೆ ರಾಜಕೀಯ ಪ್ರಾತಿನಿಧ್ಯ ನೀಡಲು ತಿದ್ದುಪಡಿಯನ್ನು ತರುವುದರ ಮೂಲಕ ಅವರನ್ನು ಸಹಾ ಮುಖ್ಯವಾಹಿನಿಗೆ ತರುವಂತ ಕಾರ್ಯವನ್ನು ಮಾಡಿದರು ಎಂದರು.

ಕಾರ್ಯಕ್ರಮದಲ್ಲಿ ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಸರ್ಕಾರದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರಾದ ಆರ್,ಶಿವಣ್ಣ, ನಗರಸಭೆಯ ಮಾಜಿ ಅಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ ರಾಜೀವಗಾಂಧಿ ಹಾಗೂ ದೇವರಾಜ್ ಆರಸು ರವರ ಬಗ್ಗೆ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್ ವಹಿಸಿದ್ದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಳಾದ ಸಂಪತ್ ಕುಮಾರ್, ಮೈಲಾರಪ್ಪ, ಪೈಲ್ವಾನ್ ತಿಪ್ಪೇಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿಗೌಡ, ಪ್ರಕಾಶ್, ನಜ್ಮಾತಾಜ್, ಮೋಕ್ಷಾ ರುದ್ರಸ್ವಾಮಿ, ರವಿಕುಮಾರ್, ಶಬ್ಬಿರ್, ಮುದಸಿರ್ ನವಾಜ್, ಸುದರ್ಶನ್, ನಾಗರಾಜ್, ರಮೇಶ್ ಬಾಬು, ರಾಜು, ನಗರಸಭಾದ ಸದಸ್ಯರಾದ ಮೀನಾಕ್ಷಿ, ಮಾಜಿ ಅಧ್ಯಕ್ಷರಾದ ಹೆಚ್.ಮಂಜಪ್ಪ, ಮೃತುಂಜಯ ಸುಧಾ ಸೇರಿದಂತೆ ಇತರರು ಭಾಗವಹಿಸಿದ್ದರು.

**ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ**

# ಸಾಮಾನ್ಯರಿಂದ ಅಸಾಮಾನ್ಯಕ್ಕೇರಿದವರು ಬ್ರಹ್ಮಶ್ರೀ ನಾರಾಯಣ ಗುರುಗಳು

» **ಚಿತ್ರದುರ್ಗ**

ನಾರಾಯಣ ಗುರುಗಳು ಅವರು ಹಿಂದುಳಿದ ಸಾಮಾನ್ಯ ಕುಟುಂಬದಲ್ಲಿ ಜನಿಸಿ, ಸಾಮಾನ್ಯರಿಂದ ಅಸಾಮಾನ್ಯಕ್ಕೇರಿ ಬ್ರಹ್ಮಶ್ರೀ ಪದವಿ ಪಡೆದ ಮಹಾನ್ ಗುರುಗಳು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮದಲ್ಲಿ ನಾರಾಯಣಗುರುಗಳ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ನಾರಾಯಣ ಗುರುಗಳು ಅಂದಿನ ದಿನಮಾನಗಳಲ್ಲಿನ ಶೋಷಣೆ, ಧಾರ್ಮಿಕ ಅಸಹಿಷ್ಣುತೆ, ಅಸ್ಪೃಶ್ಯತೆಯ ಪಿಡುಗು ಹೋಗಲಾಡಿಸಲು ಶ್ರಮಿಸಿದವರು.

ಸಾಮಾನ್ಯ ಜನರಿಗೆ ದೇವಾಲಯದ ಒಳಗಡೆ ಹೋಗಲು ಅವಕಾಶ ಸಿಗದಿದ್ದ ಸಂದರ್ಭದಲ್ಲಿ ನಾರಾಯಣ ಗುರುಗಳು ಪರ್ಯಾಯವಾಗಿ ದೇವಸ್ಥಾನಗಳನ್ನು ನಿರ್ಮಾಣ ಮಾಡಿದರು ಎಂದು ತಿಳಿಸಿದ ಅವರು, ಬ್ರಹ್ಮಶ್ರೀ ನಾರಾಯಣ ಗುರುಗಳ ತತ್ವಾದರ್ಶಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದು ಹೇಳಿದರು.

ಆರ್ಯ ಈಡಿಗ ಸಮಾಜದ ವತಿಯಿಂದ ವಸತಿ ನಿಲಯ ನಿರ್ಮಾಣ ಮಾಡಿ, ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸಕ್ಕೆ ಅವಕಾಶ ಕಲ್ಪಿಸಲಾಗಿದೆ. ಜತೆಗೆ ಸಮಾಜಕ್ಕೆ ಸರ್ಕಾರ ಸಾಕಷ್ಟು ಸೌಲಭ್ಯಗಳನ್ನು ನೀಡಿದ್ದು, ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಶೈಕ್ಷಣಿಕವಾಗಿ, ಔದ್ಯೋಗಿಕವಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಆರ್ಯ ಈಡಿಗ ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಜೀವನ್, ಮಹಿಳಾ ಘಟಕದ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿ ಕುಮಾರಸ್ವಾಮಿ, ಖಜಾಂಚಿ ನಾಗೇಂದ್ರ ಪ್ರಸಾದ್, ತಾಲ್ಲೂಕು ಅಧ್ಯಕ್ಷ ಜಗದೀಶ, ಜಿಲ್ಲಾ ಉಪಾಧ್ಯಕ್ಷ ಟಿ.ಸ್ವಾಮಿ, ತಾಲ್ಲೂಕು ಅಧ್ಯಕ್ಷ ಲಕ್ಷ್ಮೀಕಾಂತ್, ನಗರಸಭೆ ಸದಸ್ಯೆ ಅನುರಾಧ ರವಿಕುಮಾರ್, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಚಿತ್ರದುರ್ಗ ಶಾಖೆಯ ಉಪ ವ್ಯವಸ್ಥಾಪಕ ಸತ್ಯನಾರಾಯಣ, ಆಹಾರ ಇಲಾಖೆ ಸಹಾಯಕ ನಿರ್ದೇಶಕಎಸ್.ಕೆ.ಮಲ್ಲಿಕಾರ್ಜುನ್, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ಸಮಾಜದ ಮುಖಂಡರು ಇದ್ದರು.

# ಮಳೆ ವರದಿ: ಜಿಲ್ಲೆಯಲ್ಲಿ 12 ಮಿ.ಮೀ ಮಳೆ

» **ಚಿತ್ರದುರ್ಗ**

ಸೋಮವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ 12 ಮಿ.ಮೀ ಮಳೆಯಾಗಿದೆ.

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 17.5 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 8.5 ಹಿರಿಯೂರು ತಾಲ್ಲೂಕು 14.4 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 4.9 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 13.6 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 4.2 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 12.6 ಮಿ.ಮೀ, ನಾಯಕನಹಟ್ಟಿ 10.5 ಮಿ.ಮೀ, ಪರಶುರಾಂಪುರ 29.6 ಮಿ.ಮೀ, ತಳಕು 15.7 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 7.5 ಮಿ.ಮೀ, ಭರಮಸಾಗರ 5.2 ಮಿ.ಮೀ, ಹಿರೇಗುಂಟನೂರು 6.5 ಮಿ.ಮೀ, ತುರುವನೂರು 15 ಮಿ.ಮೀ ಮಳೆಯಾಗಿದೆ.

ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 12.3 ಮಿ.ಮೀ, ಐಮಂಗಲ 11.4 ಮಿ.ಮೀ, ಧರ್ಮಪುರ 19.7 ಮಿ.ಮೀ, ಜೆ.ಜೆ.ಹಳ್ಳಿ 14 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 6.2 ಮಿ.ಮೀ, ಬಿ.ದುರ್ಗ 6.6 ಮಿ.ಮೀ, ರಾಮಗಿರಿ 4.4 ಮಿ.ಮೀ, ತಾಳ್ಯ 3.2 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 9.7 ಮಿ.ಮೀ, ಮಾಡದಕೆರೆ 9 ಮಿ.ಮೀ, ಮತ್ತೋಡು 11.2 ಮಿ.ಮೀ, ಶ್ರೀರಾಂಪುರ 26 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮುರುನಲ್ಲಿ 3.1 ಮಿ.ಮೀ ಹಾಗೂ ದೇಮಸಮುದ್ರದಲ್ಲಿ 5.4 ಮಿ.ಮೀ ಮಳೆಯಾಗಿದೆ. 1 ಜೀವಹಾನಿ, 31 ಮನೆಗಳು ಭಾಗಶಃ ಹಾನಿ: ಸೋಮವಾರ ಸುರಿದ ಮಳೆಗೆ 1 ಜೀವಹಾನಿ ಹಾಗೂ ಜಿಲ್ಲೆಯಾದ್ಯಂತ ಒಟ್ಟು 44 ಮನೆಗಳು ಭಾಗಶಃ ಹಾನಿ, 3 ಹೆಕ್ಟೇರ್ ತೋಟಗಾರಿಕೆ ಬೆಳೆ, 1.6 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ 12 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ ತಾಲ್ಲೂಕಿನಲ್ಲಿ 5 ಮನೆಗಳು ಭಾಗಶಃ ಹಾನಿ ಹಾಗೂ 3 ಹೆಕ್ಟೇರ್ ತೋಟಗಾರಿಕೆ ಬೆಳೆಹಾನಿಯಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 4 ಮನೆಗಳು ಭಾಗಶಃ ಹಾನಿ, 1 ಜೀವಹಾನಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿವೆ. ಹಿರಿಯೂರು ತಾಲ್ಲೂಕಿನಲ್ಲಿ 8 ಮನೆಗಳು ಭಾಗಶಃ ಹಾನಿಯಾಗಿದ್ದು, 1.61 ಹೆಕ್ಟೇರ್ ಕೃಷಿ ಬೆಳೆಹಾನಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

**ವಿಶ್ವ ಸೊಳ್ಳೆ ದಿನದಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಅಭಿಪ್ರಾಯ**

# ವಿದ್ಯಾರ್ಥಿಗಳು ಸೊಳ್ಳೆ ತಾಣ ನಾಶ ಮುಖ್ಯ ಗುರಿಯಾಗಲಿ

» **ಚಿತ್ರದುರ್ಗ**

ವಿದ್ಯಾರ್ಥಿಗಳು ಸೊಳ್ಳೆ ತಾಣಗಳ ನಾಶ ಮಾಡಲು ಮುಖ್ಯ ಗುರಿಯಾಗಿಸಿ ಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.



ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಮಂಗಳವಾರ ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ವಿಶ್ವ ಸೊಳ್ಳೆ ದಿನದಲ್ಲಿ ಅವರು ಮಾತನಾಡಿದರು.

ವಿಶ್ವ ಸೊಳ್ಳೆ ದಿನವೆಂದರೆ ಆಚರಿಸುವ ಹಬ್ಬವಲ್ಲ. ಇದು ಮಾಹಿತಿ ಶಿಕ್ಷಣ ನೀಡುವ ಮೂಲಕ ಕೀಟಜನ್ಯ ರೋಗಗಳ ಜಾಗೃತಿ ಮೂಡಿಸುವ ಕಾರ್ಯಕ್ರಮವಾಗಿದೆ. ಆಗಸ್ಟ್ 20 1897 ರಂದು ರೋನಾಲ್ಡ್ ರಾಸ ಅವರು ಮಲೇರಿಯಾ ರೋಗ ಹೆಣ್ಣು ಅನಾಫೀಲಿಸ್ ಸೊಳ್ಳೆಗಳಿಂದ ಹರಡುತ್ತದೆ ಎಂದು ಪತ್ತೆ ಹಚ್ಚಿದ ದಿನವಾದ್ದರಿಂದ ಆ ದಿನವನ್ನು ಪ್ರತಿ ವರ್ಷ ಆಗಸ್ಟ್ 20ನೇ ತಾರೀಕಿನಂದು ಜಾಗೃತಿ ಮೂಡಿಸುವ ಸಲುವಾಗಿ ವಿಶ್ವ ಸೊಳ್ಳೆ ದಿನವೆಂದು ಮಾಹಿತಿ ಶಿಕ್ಷಣ ಕಾರ್ಯಕ್ರಮ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ನಡೆಸಲಾಗುತ್ತಿದೆ ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಮಾತನಾಡಿ, ಭಾರತ ದೇಶವು 4151 ಸೊಳ್ಳೆ ಪ್ರಭೇದಗಳ ದೇಶವಾಗಿದೆ. ಈ ಸಣ್ಣ ಜೀವಿಗಳು ನಮ್ಮ ದೇಹಕ್ಕೆ ಎಂತಹ ಅಪಾಯ ಉಂಟು ಮಾಡುತ್ತವೆ ಎಂದರೆ ಮಲೇರಿಯಾ, ಚಿಕನ್‌ಗುನ್ಯಾ, ಡೆಂಗ್ಯೂ, ಜಿಕಾ ದಂತಹ ಮಾರಣಾಂತಿಕ ರೋಗವಾಹಕಗಳಾಗಿವೆ. ಸೊಳ್ಳೆಗಳ ನಿಯಂತ್ರಣ ಮಾಡದಿದ್ದಲ್ಲಿ ಮುದೊಂದು ದಿನ ದೊಡ್ಡ ಮಟ್ಟದ ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿ ಆರ್ಥಿಕ ಹೊರೆಉಂಟಾಗ ಬಹುದು ಎಂದು ಹೇಳಿದರು. ಸೊಳ್ಳೆಗಳ ನಿಯಂತ್ರಣದಲ್ಲಿ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಕೈ ಜೋಡಿಸಿ ಕೀಟಜನ್ಯ ರೋಗಗಳನ್ನು ನಿಯಂತ್ರಿಸಿ, ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣ ಬಳಸಿ ರೀಲ್ಸ್, ಸಣ್ಣ ಕತೆಗಳನ್ನು ಫೇಸ್ ಬುಕ್, ಇನ್ ಸ್ಟಾಗ್ರಾಮ್ ಟ್ವಿಟರ್ ಪೇಜ್ ಮೂಲಕ ಸಾಮಾಜಿಕ ಅರಿವು ಮೂಡಿಸಿ ಉತ್ತಮ ರಚನೆಗೆ ಬಹುಮಾನ ನೀಡಲಾಗುತ್ತದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ವೈದ್ಯಾಧಿಕಾರಿ ಡಾ.ಸುರೇಂದ್ರ. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣಾನಾಯ್ಕ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸುರೇಶ್ ಬಾಬು, ಶ್ರೀನಿವಾಸ್, ಮಲ್ಲಿಕಾರ್ಜುನ ಶ್ರೀನಿವಾಸ ಮಳಲಿ, ಗುರುಮೂರ್ತಿ ನಾಗರಾಜ್, ಪ್ರವೀಣ್, ಪ್ರಾಂಶುಪಾಲ ನರಸಿಂಹ ಮೂರ್ತಿ, ಉಪನ್ಯಾಸಕರಾದ ಕೃಷ್ಣ, ವಿ.ಚನ್ನಬಸಪ್ಪ, ಎನ್.ರಾಘವೇಂದ್ರ, ಡಾ.ಮೋಹನ್, ತಿಪ್ಪೇಸ್ವಾಮಿ ಇದ್ದರು.

**ಫಾಸ್ಟ್ ನ್ಯೂಸ್**

## ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

» **ದಾವಣಗೆರೆ**

ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದಿಂದ ವಿನೋಬಾ ನಗರದಲ್ಲಿನ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, 2023-24ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳು ಆಗಸ್ಟ್ 23ರೊಳಗೆ ಸ್ವವಿವರವುಳ್ಳ ಅರ್ಜಿಗಳನ್ನು ವಿನೋಬಾ ನಗರದ 1ನೇ ಮುಖ್ಯರಸ್ತೆಯ, 17ನೇ ತಿರುವಿನಲ್ಲಿನ ಮಡಿವಾಳ ಮಾಚಿದೇವ ಸಮುದಾಯ ಭವನ, ದಾವಣಗೆರೆ ಇಲ್ಲಿಗೆ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿಯುಸಿ ಅಂಕಪಟ್ಟಿ, ವರ್ಗಾವಣೆ ಪತ್ರ (ಟಿಸಿ), ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಭಾವಚಿತ್ರಗಳೊಂದಿಗೆ ತಮ್ಮ ದಾಖಲಾತಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಎಂ.ನಾಗೇಂದ್ರಪ್ಪ- 9448000077, ಆರ್.ಎನ್.ಧನಂಜಯ್-9844001462, ಸುರೇಶ್ ಎಂ.ಕೋಗುಂಡೆ- 9880497271, ಸಿ.ಗುಡ್ಡಪ್ಪ- 8892624949, ಪಿ.ಮಂಜುನಾಥ್- 9980087033ಗೆ ಸಂಪರ್ಕಿಸಬಹುದು.

## ಕಾರ್ಯಾಗಾರ

» **ದಾವಣಗೆರೆ**

ಆಗಸ್ಟ್ 21 ರಂದು ಸಂಜೆ 4 ಗಂಟೆಗೆ ದಾವಣಗೆರೆ ಹಿರಿಯಉಪನೋಂದಣಾಧಿಕಾರಿಗಳಕಚೇರಿಯಲ್ಲಿ ಕಾವೇರಿ 2.0 ತಂತ್ರಾಂಶದ ಕುರಿತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಪತ್ರ ಬರಹಗಾರರು ಮತ್ತು ವಕೀಲರಿಗೆ ತರಬೇತಿಯನ್ನು ಆಯೋಜಿಸಲಾಗಿದೆ ಎಂದು ಉಪನೋಂದಣಾಧಿಕಾರಿ ನಾಗರಾಜು ತಿಳಿಸಿದ್ದಾರೆ.

## ಅಗ್ನಿವೀರರ ನೇಮಕಾತಿ ವಿಶ್ರಾಂತಿಗಾಗಿ ನೌಕರರ ಭವನದಲ್ಲಿ ಅವಕಾಶ

» **ದಾವಣಗೆರೆ**

ಆಗಸ್ಟ್ 22 ರಿಂದ ಶಿವಮೊಗ್ಗದಲ್ಲಿ ನಡೆಯುವ ಅಗ್ನಿಪಥ್ ಯೋಜನೆಯಡಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸಲು ವಿವಿಧ ಜಿಲ್ಲೆಗಳಿಂದ ಆಗಮಿಸುತ್ತಿರುವ ಅಭ್ಯರ್ಥಿಗಳಿಗೆ ತಾತ್ಕಾಲಿಕ ವಿಶ್ರಾಂತಿಗಾಗಿ ಶಿವಮೊಗ್ಗದ ಕೆ.ಇ.ಬಿ. ವೃತ್ತದಲ್ಲಿನ ಸರ್ಕಾರಿ ನೌಕರರ ನೂತನ ಸಮುದಾಯ ಭವನದಲ್ಲಿ ವ್ಯವಸ್ಥೆ ಮಾಡಲಾಗಿದೆ ಎಂದು ಶಿವಮೊಗ್ಗ ಅಪರ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ಗೃಹಲಕ್ಷ್ಮಿಗೆ ಇಕೆವೈಸಿ, ಸ್ಮಾರ್ಟ್ ಕಾರ್ಡ್ ಸುಳ್ಳು ವದಂತಿಗೆ ಕಿವಿಗೊಡಬೇಡಿ

» **ದಾವಣಗೆರೆ**

ರಾಜ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯ 11 ಮತ್ತು 12ನೇ ಕಂತುಗಳು ಜಮೆಯಾಗಲು ಸ್ವಲ್ಪ ತಡವಾಗಿದ್ದು ಇದನ್ನೇ ಬಂಡವಾಳ ಮಾಡಿಕೊಂಡು ಕೆಲವು ಸ್ಥಳೀಯ ಆನ್‌ಲೈನ್ ಸೆಂಟರ್‌ನವರು ಇ-ಕೆವೈಸಿ ಮಾಡಿಸಬೇಕು, ಪಿಂಕ್ ಸ್ಮಾರ್ಟ್ ಕಾರ್ಡ್ ಇದ್ದರೆ ಮಾತ್ರ ಗೃಹಲಕ್ಷ್ಮಿ ಹಣ ಬರುತ್ತದೆ ಎಂಬ ಸುಳ್ಳು ವದಂತಿ ಹರಡುತ್ತಿದ್ದಾರೆ. ಫಲಾನುಭವಿಗಳನ್ನು ನಂಬಿಸಿ ಅವರಿಂದ ಇಂತಿಷ್ಟು ಹಣ ಪಡೆದುಕೊಂಡು ಎಡಿಟ್ ಮಾಡಿ ಡೂಪ್ಲಿಕೇಟ್ ಪಿಂಕ್ ಸ್ಮಾರ್ಟ್ ಕಾರ್ಡ್ ಮಾಡಿಕೊಟ್ಟು ವಂಚಿಸುತ್ತಿದ್ದಾರೆ. ಆದ್ದರಿಂದ ಇಂತಹ ವಂಚಕರಿಂದ ಜಾಗ್ರತರಾಗಿರಲು ತಿಳಿಸಿ, ಸರ್ಕಾರ ಇಂತಹ ಕಾರ್ಡ್‌ಗಳಿಗೆ ಯಾವುದೇ ಅಧಿಕೃತ ಆದೇಶ ನೀಡಿರುವುದಿಲ್ಲ ಎಂದು ಚನ್ನಗಿರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

## ವಿವಿಧ ಸಾಲ ಸೌಲಭ್ಯ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನ ಉಪ್ಪಾರ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ನೇರಸಾಲ, ಸ್ವಯಂ ಉದ್ಯೋಗ ನೇರಸಾಲ (ಬ್ಯಾಂಕುಗಳ ಸಹಯೋಗದೊಂದಿಗೆ), ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ), ಅರಿವು ಶೈಕ್ಷಣಿಕ ಸಾಲ ಯೋಜನೆ (ನವೀಕರಣ), ವಿದೇಶಿ ವ್ಯಾಸಂಗ ಸಾಲ ಯೋಜನೆ (ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.8.00ಲಕ್ಷಗಳ ಮೀತಿಯಲ್ಲಿರಬೇಕು), ಗಂಗಾ ಕಲ್ಯಾಣ ನೀರಾವರಿ ಯೋಜನೆಯಡಿ ಕನಿಷ್ಠ 2 ಎಕರೆ ಹೊಂದಿರಬೇಕು, ಸ್ವಾವಲಂಬಿ ಸಾರಥಿ ಯೋಜನೆಗಳ ಸಾಲ ಸೌಲಭ್ಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಲು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಗ್ರಾಮಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್ ಜಿ ಜನಸ್ನೇಹಿ ಮತ್ತು ನಾಗರೀಕ ಸೇವಾ ಕೇಂದ್ರಗಳಮೂಲಕಅರ್ಜಿಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಲು ಸೆ.16 ಕೊನೆ ದಿನೆ. ಹೆಚ್ಚಿನ ಮಾಹಿಗಾಗಿ ನಿಗಮದ ವೆಬ್‌ಸೈಟ್ https://upparadevelopment.karnataka.gov.in ಇಲ್ಲಿ ವಿಕ್ಷೀಸಬಹುದು.

# ಚಿಣ್ಣರ ವನ ದರ್ಶನಕ್ಕೆ ಹೊರಟ ವಿದ್ಯಾರ್ಥಿಗಳು

» **ಮಹದೇವಪುರ ಶಿವಮೂರ್ತಿ**





ಪರಶುರಾಂಪುರ: ಗ್ರಾಮದಕೆಪಿಎಸ್ ಶಾಲೆಯ ಪ್ರೌಢಶಾಲಾ ವಿದ್ಯಾರ್ಥಿಗಳು ಅರಣ್ಯ ಇಲಾಖೆ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಸಹಭಾಗಿತ್ವದಲ್ಲಿಚಿಣ್ಣರ ವನದರ್ಶ ನಕಾರ್ಯಕ್ರಮದಡಿ ಮಂಗಳವಾರ ಎರಡು ದಿನಗಳ ಪ್ರವಾಸ ಪಯಣ ಹೊರಟರು.

ಸಹಾಯಕಅರಣ್ಯ ಸಂರಕ್ಷಣಾಧಿಕಾರಿಎಸ್ ಸುರೇಶ್ ಚಾಲನೆ ನೀಡಿ, ಚಿಣ್ಣರುಕಾಡಿನಲ್ಲಿ ಹೋಗುವಾಗ ಶಾಂತರಾಗಿದ್ದು ಪ್ರಾಣಿಗಳ ವೀಕ್ಷಣೆಗೆ ಹೆಚ್ಚಿನ ಮಹತ್ವ ನೀಡಬೇಕು.ಅಲ್ಲದೇ ವನದಲ್ಲಿಇರುವಜೀವವೈವಿದ್ಯತೆಯು ಮಹತ್ವ ತಿಳಿದುಕೊಳ್ಳಬೇಕು ಎಂದರು.

ವಲಯಅರಣ್ಯಾಧಿಕಾರಿ ವಿ ಎಸ್ ಮಂಜುನಾಥ್ ಮಾತನಾಡಿ ವಿದ್ಯಾರ್ಥಿಜೀವನದಿಂದಲೇಅರಣ್ಯ, ವನ್ಯಜೀವಿಗಳ ಕುರಿತುಅರಿವುಇರಬೇಕು. ಅರಣ್ಯಇಲಾಖೆಯ ಮೂಲಕ ಹಮ್ಮಿಕೊಂಡಿರುವ'ಚಿಣ್ಣರ ವನ ದರ್ಶನದ ಸದುಪಯೋಗದಿಂದ ಪರಿಸರ ಕಾಳಜಿ ರೂಢಿಸಿಕೊಳ್ಳಿ ಎಂದು ಹೇಳಿದರು.

ವಿದ್ಯಾರ್ಥಿಗಳಿಗೆಚಿಣ್ಣರ ವನ ದರ್ಶನ ಬ್ಯಾಗ್‌ಕಿಟ್ ಕಾನನ ಕಣಜ ಪುಸ್ತಕಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸಿಬ್ಬಂದಿಗಳಾದ ಗುರುಲಿಂಗೇಶ್ ,ವಸಂತ ಕುಮಾರ್,ರಾಜೇಶ್ ಮತ್ತು ಪ್ರಭಾರಿ ಮುಖ್ಯ ಶಿಕ್ಷಕ ದೇವಾನಂದ ಭಂಡಾರಿ,ಶಿಕ್ಷಕರಾದ ಹೇಮಂತ್ ಮತ್ತುತಿಮ್ಮಣ್ಣ ಹಾಗೂ ವಲಯದ ಸಿಬ್ಬಂದಿಗಳು ಹಾಜರಿದ್ದರು.

**ಏನು ಉದ್ದೇಶ?:** ಅರಣ್ಯ, ವನ್ಯಜೀವಿ ಸಂಕುಲ ಸಂರಕ್ಷಣೆ, ಮಾಲಿನ್ಯ ಮುಕ್ತ ಪರಿಸರ, ಭವಿಷ್ಯಕ್ಕೆ ಅರಣ್ಯಗಳ ಉಳಿವು ಅತ್ಯವಶ್ಯಕ ಎಂಬ ಅರಿವನ್ನು ವಿದ್ಯಾರ್ಥಿಗಳಿಗೆ ಮೂಡಿಸುವುದು, ಪ್ರತಿಯೊಬ್ಬರನ್ನು ಭವಿಷ್ಯದ ಪರಿಸರಸ್ನೇಹಿ ನಾಗರಿಕರನ್ನಾಗಿರೂಪಿಸುವ ದೃಷ್ಟಿಯಿಂದ ಶಾಲಾ ಮಕ್ಕಳಿಗೆ ಅರಿವುಮೂಡಿಸುವುದುಂ ಯೋಜನೆಯಉದ್ದೇಶ. ಸಸ್ಯ ಸಂಕುಲಗಳು ಮನುಷ್ಯನ ಅಸ್ತಿತ್ವ ಮತ್ತುಜೀವಜಲದ ಮೂಲಗಳೇ ಹೊರತುಆದಾಯದ ಮೂಲವಲ್ಲಎಂಬ ಅರಿವು ಮೂಡಲುಇದುರೂಪುಗೊಂಡಿದೆ.

**ಊಟ ವಸತಿಫ್ರೀ:** 2 ದಿನಗಳ ಈ ವನ ದರ್ಶನಕ್ಕೆ ಬರುವ ಮಕ್ಕಳಿಗೆ ಊಟ, ವಸತಿ, ವಾಹನ ಸೌಲಭ್ಯವನ್ನುಉಚಿತ 'ವಾಗಿಕಲ್ಪಿಸಲಾಗುವುದು.ಪ್ರಕೃತಿ ಶಿಬಿರಕ್ಕೆ ಕರೆದೊಯ್ಯುವುದು, ಸಾಕ್ಷ್ಯಚಿತ್ರ ತೋರಿಸಿ ಅರಣ್ಯ ಮತ್ತು ವನ್ಯಜೀವಿ ಸಂಕುಲದ ಬಗ್ಗೆ ಮಾಹಿತಿ ನೀಡುವುದು, ಚಾರಣ ಮತ್ತು ವೀಕ್ಷಣೆಗೆ ಅವಕಾಶ ಸಿಗಲಿದದೆ.

**ಮಕ್ಕಳಿಗೆ 2 ದಿನಗಳ ಪ್ರವಾಸ:** ಚಿಣ್ಣರ ವನ ದರ್ಶನ2 ದಿನಪ್ರವಾಸವಾಗಿದ್ದು, ಮೊದಲ ದಿನ ಹೊಸಪೇಟೆಯಗುಂಡಟ್ರೀ ಪಾರ್ಕ್ ಬಳಿಕ ನರ್ಸರಿ,ದಾರೋಜಿಕರಡಿಧಾಮ ಸೇರಿದಂತೆಇನ್ನಿತರ ಪರಿಸರ ವೀಕ್ಷಿಸಿ ಬಳಿಕ ಅಂದುರಾತ್ರಿ ಉಳಿದು ಬೆಳಿಗ್ಗೆ ಅರಣ್ಯಚಾರಣಜತೆಅಟಲ್ ಬಿಹಾರಿ ವಾಜಪೇಯಿ ಪ್ರಾಣಿ ಸಂಗ್ರಹಾಲಯ ವೀಕ್ಷಿಸಿ ಊಟದ ಬಳಿಕ ವನ್ಯ ಜೀವಿಗಳು ಹಾಗೂ ಸರಿಸೃಪಗಳ ಬಗ್ಗೆ ಸಾಕ್ಷ್ಯ ಚಿತ್ರಗಳನ್ನುಗಮನಿಸಿ ಅಳಿವಿನಂಚಿನಲ್ಲಿರುವ ವನ್ಯಜೀವಿಗಳ ಕುರಿತುಉಪನ್ಯಾಸ ಹಾಗೂ ಸಂವಾದ ನಂತರ ವೇಳೆಗೆ ಅಲ್ಲಿಂದ ಸ್ವಗ್ರಾಮದತ್ತ ಪ್ರಯಾಣಆರಂಭಿಸಲಾಗುತ್ತದೆಎಂದು ಮಾಹಿತಿ ನೀಡಿದರು.

# ಗಣಿಬಾಧಿತ ಪ್ರದೇಶಾಭಿವೃದ್ಧಿ ಯೋಜನೆಯಡಿ ಪ್ರಗತಿ ಕಾರ್ಯಗಳಿಗೆ ಭೂಮಿ ಪೂಜೆ ಸಲ್ಲಿಸಿದ: ಗೋವಿಂದಪ್ಪ

» **ಹೊಸದುರ್ಗ**



ತಾಲೂಕಿನ ಕಂಚೀಪುರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗಣಿಬಾಧಿತ ಪ್ರದೇಶಾಭಿವೃದ್ಧಿ ಯೋಜನೆಯಡಿ ಕೆ.ಕೆ.ಪುರ ಸಮುದಾಯ ಆರೋಗ್ಯ ಕೇಂದ್ರದ ಡಾಕ್ಟರ್ಸ್, ಔಷಧಿಗಾರರ ವಸತಿ ಗೃಹ ನಿರ್ಮಾಣಕ್ಕೆ 6.75 ಕೋಟಿ, ಕಿಟ್ಟದಾಳ್- ಎ ಗ್ರಾಮದ ನೂತನ ಆರೋಗ್ಯ ಉಪಕೇಂದ್ರ ನಿರ್ಮಾಣಕ್ಕೆ 1.ಕೋಟಿ, ಕಿಟ್ಟದಾಳ್- ಬಿ ಗ್ರಾಮದ ನೂತನ ಆರೋಗ್ಯ ಉಪಕೇಂದ್ರ ನಿರ್ಮಾಣಕ್ಕೆ 1.ಕೋಟಿ, ಕಂಚೀಪುರ ಗ್ರಾಮದ ನೂತನ ಆರೋಗ್ಯ ಉಪಕೇಂದ್ರ ನಿರ್ಮಾಣಕ್ಕೆ 1.ಕೋಟಿ, ಕಿಟ್ಟದಾಳ್ ಗ್ರಾಮದಿಂದ ಕಾನುಬೇನಹಳ್ಳಿ ಮಾರ್ಗವಾಗಿ ಡಿ.ಆರ್. ವಜ್ರ ಮುಖ್ಯರಸ್ತೆಗೆ ಸಿ.ಸಿ.ರಸ್ತೆ ನಿರ್ಮಾಣಕ್ಕೆ 7.80 ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಭೂಮಿ ಪೂಜೆ ನೆರವೇರಿತು.

ಕಿಟ್ಟದಾಳ್ ಗ್ರಾಮದಲ್ಲಿ ಸಿ.ಸಿ.ರಸ್ತೆ ಹಾಗೂ ಸೋಲಾರ್ ದೀಪ ನಿರ್ಮಾಣಕ್ಕೆ 2.92 ಕೋಟಿ, ಕಂಚೀಪುರ ಗ್ರಾಮದಲ್ಲಿ ಸಿ.ಸಿ.ರಸ್ತೆ ಹಾಗೂ ಸೋಲಾರ್ ದೀಪ ನಿರ್ಮಾಣಕ್ಕೆ 3.12 ಕೋಟಿ, ಹೊಸಗೊಲ್ಲರಹಟ್ಟಿ, ಎನ್.ಎನ್.ಕಟ್ಟೆ, ಎನ್. ಎನ್.ಕಟ್ಟೆ ಮಧ್ಯದ ತಾಂಡ ಮೇಗಳಹಟ್ಟಿಯಿಂದ ಶ್ರೀರಾಂಪುರ ಮುಖ್ಯರಸ್ತೆಗೆ ಸಂಪರ್ಕ ಕಲ್ಪಿಸುವ ಸಿ.ಸಿ.ರಸ್ತೆ ನಿರ್ಮಾಣಕ್ಕೆ 8.20.ಕೋಟಿ, ನಾಗನಾಯಕನಕಟ್ಟೆ ಗ್ರಾಮದಲ್ಲಿ ಸಿ.ಸಿ.ರಸ್ತೆ ಹಾಗೂ ಸೋಲಾರ್ ದೀಪ ನಿರ್ಮಾಣಕ್ಕೆ 3.70. ಕೋಟಿ ರೂಪಾಯಿಗಳ ವೆಚ್ಚದ ಕಾಮಗಾರಿಗಳಿಗೆ ಮಂಗಳವಾರ ಶಾಸಕ, ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ವಾಣಿಶ್ರೀ, ಉಪಾಧ್ಯಕ್ಷರಾದ ಪರಮೇಶ್, ಜಿಲ್ಲಾ ಆರೋಗ್ಯಾಧಿಕಾರಿ ರೇಣುಪ್ರಸಾದ್, ತಾಲ್ಲೂಕು ವೈದ್ಯಾಧಿಕಾರಿ ರಾಘವೇಂದ್ರ ಪ್ರಸಾದ್, ಪ್ರಚಾರ ಸಮಿತಿ ಅಧ್ಯಕ್ಷ ರಾಜಣ್ಣ, ಸಹಾಯಕ ಕಾರ್ಯಪಾಲಕ ಅಭಿಯಂತರ ಪ್ರಕಾಶ್, ಸದಸ್ಯರಾದ ಪ್ರಸನ್ನಕುಮಾರ್,ಸುರೇಶ್,ಜಯಮ್ಮ, ಮಾರಪ್ಪ, ಶ್ರೀಮತಿ ಲಕ್ಷ್ಮಿ, ರಮೇಶ್, ಮಾಜಿ ಅಧ್ಯಕ್ಷ ರಾಜನಾಯ್ಕ್, ಚಂದ್ರಪ್ಪ, ಮುಖಂಡರಾದ ಬಾಲೇನಹಳ್ಳಿ ರುದ್ರಪ್ಪ, ಸುಬ್ಬಣ್ಣ, ಚಂದ್ರಶೇಖರ್, ಸುರೇಶ್, ಕುಮಾರ್, ದುರ್ಗೇಶ್, ಗೋಪೇಶ್, ರಾಜೇಂದ್ರ, ಸ್ವಾಮಿ, ತಿಪ್ಪೇಶ್, ವರದರಾಜ್, ರಮೇಶ್ ಗೌಡ, ಮಂಜಣ್ಣ, ರಾಜಣ್ಣ, ಕಗ್ಗಲಕಟ್ಟೆ ರಾಜಪ್ಪ, ರವಿ, ಧರಣೇಶ್, ಹಾಗೂ ಸುತ್ತಮುತ್ತಲ ಗ್ರಾಮಗಳ ನೂರಾರು ಜನರಿದ್ದರು.

# ಜಿಲ್ಲಾ ಮಹಿಳಾ ಕಾಂಗ್ರೇಸ್ಸಿಂದ ಪೌರ ಕಾರ್ಮಿಕರಿಗೆ ಸನ್ಮಾನ



» **ಚಿತ್ರದುರ್ಗ**

ನಗರದಲ್ಲಿ ಮಂಗಳವಾರ ಜಿಲ್ಲಾ ಕಾಂಗ್ರೆಸ್ ಕಚೇರಿಯ ಸಭಾಂಗಣದಲಿ ಮಾಜಿ ಪ್ರಧಾನ ಮಂತ್ರಿ ರಾಜೀವಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸ್‌ರವರು 109ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಜಿಲ್ಲಾ ಮಹಿಳಾ ಕಾಂಗ್ರೇಸ್‌ವತಿಯಿಂದ ಪೌರ ಕಾರ್ಮಿಕರು ಹಾಗೂ ಕಾಂಗ್ರೆಸ್ ಪಕ್ಷದಲ್ಲಿ ಹಲವಾರು ವರ್ಷಗಳಿಂದ ದುಡಿಯ ಮಹಿಳೇಯರಿಗೆ ಸನ್ಮಾನ ಕಾರ್ಯಕ್ರಮವನ್ನು ನಡೆಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿಗೌಡ, ನಮ್ಮ ಬದುಕಿನಲ್ಲಿ ಹಲವಾರು ಜನರ ಸಹಾಯ ಅಗತ್ಯ ಇದೆ ಇಂತಹದರಲ್ಲಿ ಅತಿ ಪ್ರಮುಖವಾಗಿ ಪೌರ ಕಾರ್ಮಿಕರ ಸಹಾಯ ಅತಿ ಮುಖ್ಯವಾಗಿದೆ ಅವರು ಒಂದು ದಿನ ಕೆಲಸ ಮಾಡದೇ ಇದ್ದರೆ ನಾವುಗಳು ಜೀವನ ನಡೆಸಲು ಸಾಧ್ಯವಿಲ್ಲ, ಅವರ ಸೇವೆ ನಮಗೆ ಅತಿ ಮುಖ್ಯವಾಗಿದೆ, ಇಂತಹರನ್ನು ಸನ್ಮಾನಿಸುವುದು ನಮ್ಮ ಸೌಭಾಗ್ಯವಾಗಿದೆಎಂದರು.ಈ ಸಂದರ್ಭದಲ್ಲಿ ಎನ್.ಡಿ.ಕುಮಾರ್, ಡಾ.ಕೆ.ಅನಂತ, ಟಿ.ಸ್ವಾಮಿ, ಪಿ.ಕೆ. ಪವಿತ್ರ, ನಜ್ಮಾತಾಜ್, ಮೋಕ್ಷಾ ರುದ್ರಸ್ವಾಮಿ, ರವಿಕುಮಾರ್, ಶಬ್ಬಿರ್, ಪೈಲ್ವಾನ್ ತಿಪ್ಪೇಸ್ವಾಮಿ, ನಗರಸಭಾದ ಸದಸ್ಯರಾದ ಮೀನಾಕ್ಷಿ, ಸುಧಾ ಸೇರಿದಂತೆ ಇತರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಹೇಳಿಕೆ: ದೂರು

» **ಚಿತ್ರದುರ್ಗ**



ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡುತ್ತಿರುವ ವ್ಯಕ್ತಿಗಳ ವಿರುದ್ಧ ಹಾಗೂ ಪೂರ್ವಯೋಜಿತ ಪ್ರತಿಭಟನೆ ನಡೆಸುತ್ತಿರುವ ಕಾಂಗ್ರೆಸ್ ನಾಯಕರುಗಳು ವಿರುದ್ಧ ಇಂದು ಬೆಂಗಳೂರಿನ ಪೊಲೀಸ್ ಪ್ರಧಾನ ಕಚೇರಿಯಪೊಲೀಸ್‌ಮಹಾನಿರ್ದೇಶಕರಿಗೆ ಭಾರತೀಯ ಜನತಾ ಪಾರ್ಟಿ-ಕರ್ನಾಟಕ ದೂರು ನೀಡಲಾಯಿತು.

ರಾಜ್ಯಪಾಲರು ಮುಖ್ಯಮಂತ್ರಿಗಳ ವಿರುದ್ಧ ಖಾಸಗಿ ವ್ಯಕ್ತಿಗಳು ಮಾಡಿರುವ ಆರೋಪಗಳ ಬಗ್ಗೆ ತನಿಖೆಗೆ ಅನುಮತಿ ನೀಡಿದ ಕೂಡಲೇ ರಾಜ್ಯಪಾಲರ ವಿರುದ್ಧ ರಾಜ್ಯದಲ್ಲಿ ಕಾಂಗ್ರೆಸ್ ನಾಯಕರುಗಳು ಹಾಗೂ ಬೆಂಬಲಿಗರು ಅತ್ಯಂತ ಅವಹೇಳನಾಕಾರಿ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಅದರಲ್ಲೂ ಅವರನ್ನು ವೈಯುಕ್ತಿಕವಾಗಿ ತೇಜೋವಧೆ ಮಾಡುತ್ತಿರುವುದು ಅತ್ಯಂತ ಖಂಡನೀಯ.

ಮೊದಲಿನಿಂದಲೂ ಸಾಂವಿಧಾನಿಕ ಹುದ್ದೆಗಳಲ್ಲಿರುವವರನ್ನು ಅತ್ಯಂತ ಹೀನಾಯವಾಗಿ ನಡೆಸಿಕೊಂಡ ಕಾಂಗ್ರೆಸ್ ನಾಯಕರು ಈಗಲೂ ಅದೇ ಚಾಳಿಯನ್ನು ಮುಂದುವರೆಸಿದ್ದಾರೆ. ಅದರಲ್ಲೂ ರಾಜ್ಯದಲ್ಲಿ ತನ್ನ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ವರ್ಗಾವಣೆಗೆ ಕಾರಣರಾದ ಹಾಗೂ ಮೂಡಾದ ನಿವೇಶನಗಳನ್ನು ತಮ್ಮ ಪತ್ನಿಗೆ ಅಕ್ರಮವಾಗಿ ವರ್ಗಾಯಿಸಿಕೊಳ್ಳುವ ಮೂಲಕ ನಾಡಿನ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನತೆಗೆ ಅನ್ಯಾಯ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮತ್ತು ಕಾಂಗ್ರೆಸ್ ನಾಯಕರು ಈಗ ಶೋಷಿತ ವರ್ಗಕ್ಕೆ ಸೇರಿದ ರಾಜ್ಯಪಾಲರ ಮೇಲೆ ಮುಗಿಬಿದ್ದಿರುವುದು ಕಾಂಗ್ರೆಸ್ ಪಕ್ಷದ ಶೋಷಿತ ಸಮುದಾಯದ ವಿರೋಧೀ ಪ್ರವೃತ್ತಿಯ ದ್ಯೋತಕವಾಗಿದೆ.

ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರ ಹುದ್ದೆಯ ಘನತೆಯನ್ನು ಅರಿಯದ ಕಾಂಗ್ರೆಸ್ ನಾಯಕರುಗಳು ಅವರ ವಿರುದ್ಧ ಅವಹೇಳನಕಾರಿಯಾಗಿ ಟೀಕೆಗಳನ್ನು ಮಾಡುತ್ತಿದ್ದಾರೆ. ಹಾದಿ ಬೀದಿಯಲ್ಲಿ ಅವರ ಪ್ರತಿಕೃತಿಯನ್ನು ಸುಡುವಂತಹ ಹೀನ ಕೃತ್ಯಕ್ಕೆ ಇಳಿದಿದ್ದಾರೆ. ಮುಖ್ಯಮಂತ್ರಿಗಳ ಮೇಲೆ ಬಂದ ಆರೋಪಗಳ ಬಗ್ಗೆ ತನಿಖೆಗೆ ಆದೇಶಿಸುವುದು ರಾಜ್ಯಪಾಲರಿಗೆ ಸಂವಿಧಾನ ನೀಡಿರುವ ಅಧಿಕಾರ. ಅತ್ಯಂತ ವಿವೇಚನಾಯುಕ್ತವಾಗಿ ಕಾನೂನು ತಜ್ಞರೊಡನೆ ಸಮಾಲೋಚಿಸಿ, ಪ್ರಕರಣದ ಸೂಕ್ಷ್ಮಾತಿ ಸೂಕ್ಷ್ಮಗಳನ್ನು ಪರಾಮರ್ಶಿಸಿ ತನಿಖೆಗೆ ಆದೇಶ ನೀಡಿರುವ ರಾಜ್ಯಪಾಲರ ನಡೆಯನ್ನು ಖಂಡಿಸುವುದು, ಅವರ ಪ್ರತಿಕೃತಿಯನ್ನು ಸುಡುವುದು ಕಾಂಗ್ರೆಸ್ ನಾಯಕರು ಸಂವಿಧಾನಕ್ಕೆ ಮಾಡುತ್ತಿರುವ ಅಪಮಾನ. ಇಂತಹ ಕೃತ್ಯಗಳನ್ನು ಪೋಲೀಸರ ಸಮ್ಮುಖದಲ್ಲಿಯೇ ಮಾಡುತ್ತಿರುವ ಕಾಂಗ್ರೆಸ್ ನಾಯಕರುಗಳ ಮೇಲೆ ಕ್ರಮಕೈಗೊಳ್ಳದೆ ಪೋಲೀಸ್ ಇಲಾಖೆ ನಿರ್ಲಕ್ಷ್ಯ ತಳೆದಿದೆ.

ಇದಲ್ಲದೆ ಒಬ್ಬ ಪರಿಶಿಷ್ಟ ಜಾತಿಗೆ ಸೇರಿದ ರಾಜ್ಯಪಾಲರ ಬಗ್ಗೆ ಸಾರ್ವಜನಿಕವಾಗಿ ಅವಹೇಳನಕಾರಿ ಹೇಳಿಕೆಗಳನ್ನುನೀಡುತ್ತಿರುವ ಕಾಂಗ್ರೆಸ್ ನಾಯಕರ ವಿರುದ್ಧ ಜಾತಿ ನಿಂದನೆ ಕೇಸುಗಳನ್ನು ದಾಖಲಿಸಬೇಕಾಗಿದೆ. ಇಂತಹ ಹೇಳಿಕೆಗಳುಸಂವಿಧಾನಕ್ಕೆ ಮತ್ತು ಪರಿಶಿಷ್ಟ ಜನಾಂಗಕ್ಕೆ ಮಾಡಿದ ಅವಮಾನ. ಅಲ್ಲದೆ ಈ ತೆರನಾದ ಹೇಳಿಕೆಗಳು ಅತ್ಯಂತ ಸೂಕ್ಷ್ಮದ್ದಾಗಿದ್ದುಸಮಾಜವನ್ನು ಪ್ರಚೋದಿಸುವಂತಹ ಹೇಳಿಕೆಗಳಾಗಿದೆ. ಈ ರೀತಿಯ ಸಾಂವಿಧಾನಿಕ ಹುದ್ದೆಯಲ್ಲಿರು ವ್ಯಕ್ತಿಯ ವಿರುದ್ಧದಪ್ರತಿಭಟನೆ ಹಾಗೂ ಅವಹೇಳನಾಕಾರಿ ಹೇಳಿಕೆಗಳು ನಡೆಯುತ್ತಿದ್ದರೂ, ಕಾರಣರಾದ ವ್ಯಕ್ತಿಗಳ ವಿರುದ್ಧ ಒಂದೂ ಪ್ರಕರಣವೂ ದಾಖಲಾಗದಿರುವುದು ಪ್ರಕರಣದ ಗಂಭೀರತೆಯನ್ನು ಪೋಲೀಸ್ ಇಲಾಖೆ ಅರಿತಿಲ್ಲ ಎಂಬ ಅನುಮಾನಗಳು ಸಾರ್ವಜನಿಕವಾಗಿ ಮೂಡಲು ಕಾರಣವಾಗುತ್ತದೆ.

ಅಧಿಕಾರಕ್ಕಾಗಿ ಪರಿಶಿಷ್ಟ ಜಾತಿ ಪಂಗಡದ ಹೆಸರನ್ನು ಬಳಸಿಕೊಳ್ಳುವ, ಅಧಿಕಾರ ಬಂದ ಮೇಲೆ ಆ ಜನಾಂಗಕ್ಕೆ ಸೇರಬೇಕಾದ ಹಣವನ್ನು ದುರ್ಬಳಕೆ ಮಾಡಿಕೊಳ್ಳುವ ಕಾಂಗ್ರೆಸ್ ನಾಯಕರು, ಈಗ ನಿಯಮಾವಳಿಗಳ ಪ್ರಕಾರವೇ ಮುಖ್ಯಮಂತ್ರಿಗಳ ವಿರುದ್ಧ ತನಿಖೆ ನಡೆಸಲು ಅನುಮತಿ ನೀಡಿದ ಪರಿಶಿಷ್ಟ ಜಾತಿಗೆ ಸೇರಿದ ರಾಜ್ಯಪಾಲರನ್ನು ವೈಯುಕ್ತಿವಾಗಿ ನಿಂದನೆ ಮಾಡುವಂತಹ ಕೀಳು ಪ್ರವೃತ್ತಿಗೆ ಮಟ್ಟಕ್ಕೆ ಇಳಿದಿರುವುದು ಅತ್ಯಂತ ದುದೃಷ್ಟಕರ. ಅದರಲ್ಲೂ ಸಾಂವಿಧಾನಿಕ ಹುದ್ದೆಯನ್ನು ಅಲಂಕರಿಸಿರುವ, ನಿಯಮಾವಳಿಗಳ ಪ್ರಕಾರವೇ ತನಗಿರುವ ಅಧಿಕಾರವನ್ನು ಉಪಯೋಗಿಸಿಕೊಂಡುತನಿಖೆಗೆಅನುಮತಿ ನೀಡಿರುವ ರಾಜ್ಯಪಾಲರನ್ನು ಕಾಂಗ್ರೆಸ್ ನಾಯಕರು ಹಾಗೂ ಹಿಂಬಾಲಕರು ನಿಂದಿಸುತ್ತಿರುವುದು, ರಾಜ್ಯಪಾಲರು ಒಬ್ಬ ಪರಿಶಿಷ್ಟ ಜಾತಿಗೆ ಸೇರಿದವರು ಎನ್ನುವ ಕಾರಣದಿಂದಲೇ ಎನ್ನುವ ಅನುಮಾನಗಳು ಮೂಡುತ್ತಿವೆ. ರಾಜ್ಯಪಾಲರು ಸಾಂವಿಧಾನಿಕ ಅಧಿಕಾರಿಯಾಗಿದ್ದು, ಸಾರ್ವಜನಿಕರ ವೈಯಕ್ತಿಕ ದಾಳಿಯನ್ನು ಎದುರಿಸಲು ಸಾಧ್ಯವಿಲ್ಲ ಹಾಗೂ ವಾಕ್ ಸ್ವಾತಂತ್ರ್ಯದ ನೆಪದಲ್ಲಿ ವ್ಯಕ್ತಿಯ ಪ್ರತಿಷ್ಠೆಗೆ ಧಕ್ಕೆ ತರುವಂತಹ ಮಾನ ಹಾನಿಕರ ಹೇಳಿಕೆಗಳನ್ನು ನೀಡುವಂತಿಲ್ಲ ಎಂದು ಕಲ್ಕತ್ತಾ ಉಚ್ಚ ನ್ಯಾಯಾಲಯ ಆದೇಶಿಸಿದೆ.

ಹೀಗಿದ್ದರೂ, ಬಾಂಗ್ಲಾ ದೇಶದ ಪ್ರಧಾನಮಂತ್ರಿ ಶ್ರೀಮತಿ ಶೇಖ್ ಹಸೀನಾಗೆ ಬಂದ ಗತಿ ತಮಗೂ ಬರುತ್ತದೆ, ನಾವು ಕಾಂಗ್ರೆಸ್ಸಿಗರು ರಾಜ್ ಭವನಕ್ಕೆ ನುಗ್ಗಿ ತಮ್ಮನ್ನು ಓಡಿಸುವ ಕೆಲಸವನ್ನು ಮಾಡುತ್ತೇವೆ ಎಂದು ಪ್ರಚೋದನಾಕಾರಿ ಹೇಳಿಕೆ ನೀಡಿರುವ ವಿಧಾನ ಪರಿಷತ್ ಸದಸ್ಯರಾದ ಐವಾನ್ ಡಿಸೋಜಾ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟರೆ ಅದಕ್ಕೆ ರಾಜ್ಯಪಾಲರೇ ಕಾರಣ ಎಂಬ ವಿವಾದಾತ್ಮಕ ಹೇಳಿಕೆ ನೀಡಿರುವ ಸಚಿವರಾದ ಜಮೀರ್ ಅಹಮದ್ ಅವಾಚ್ಯ ಶಬ್ದಗಳಿಂದ ನಿಂದಿಸಿರುವ ಸಚಿವರಾದ ಕೃಷ್ಣಭೈರೇಗೌಡ, ದಿನೇಶ್ ಗುಂಡೂರಾವ್, ಶಾಸಕರಾದ ನಂಜೇಗೌಡ ಹಾಗೂ ಇನ್ನು ಅನೇಕ ಕಾಂಗ್ರೆಸ್ ಮುಖಂಡರ ವಿರುದ್ಧ ಜಾತಿ ನಿಂದನೆ ಹಾಗೂ ಗೂಂಡಾ ಕಾಯಿದೆಯಡಿ ತಕ್ಷಣ ಬಂಧಿಸಿ, ಕಾನೂನು ಕ್ರಮ ಕೈಗೊಂಡು ರಾಜ್ಯಪಾಲರ ವಿರುದ್ಧ ವೈಯುಕ್ತಿಕ ನಿಂದನಾ ಹೇಳಿಕೆಗಳನ್ನು ನೀಡುತ್ತಿರುವ ಹಾಗೂ ಪ್ರತಿಭಟನೆಗಳ ಮೂಲಕ ಸಾಂವಿಧಾನಿಕ ಹುದ್ದೆಯಾದ ರಾಜ್ಯಪಾಲ ಹುದ್ದೆಗೆ ಅಗೌರವ ತೋರಿಸುತ್ತಿರುವ ಕಾಂಗ್ರೆಸ್ ನಾಯಕರುಗಳನ್ನು ಪ್ರತೀ ಜಿಲ್ಲೆಯಲ್ಲಿ ಗುರುತಿಸಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಈ ರೀತಿಯ ಅವಹೇಳನಾಕಾರಿ ಮತ್ತು ಪೂರ್ವಯೋಜಿತಪ್ರತಿಭಟನೆಗಳುಮುಂದೆ ನಡೆಯದಂತೆ ಕ್ರಮ ಕೈಗೊಳ್ಳಬೇಕೆಂದೂ, ಇಲ್ಲದಿದ್ದಲ್ಲಿ ಬಿಜೆಪಿ ಉಗ್ರ ಹೋರಾಟವನ್ನು ಕೈಗೊಳ್ಳಬೇಕಾಗುತ್ತದೆ. ಇದಕ್ಕೆ ಪೋಲೀಸ್ ಇಲಾಖೆಯೇ ಹೊಣೆ ಎಂಬ ಸಂದೇಶವನ್ನು ಈ ಮೂಲಕ ನೀಡುತ್ತಿದ್ದೇವೆ.

ಈ ಸಂದರ್ಭದಲ್ಲಿ ಮಾಜಿ ಉಪಮುಖ್ಯಮಂತ್ರಿ ಹಾಗೂ ಚಿತ್ರದುರ್ಗದ ಸಂಸದರಾದ ಗೋವಿಂದ ಕಾರಜೋಳ, ವಿಧಾನಪರಿಷತ್ ವಿಪಕ್ಷ ನಾಯಕರಾದ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ರಾಜ್ಯ ಉಪಾಧ್ಯಕ್ಷರು ಮತ್ತು ಮಾಜಿ ಸಚಿವರಾದ ಎನ್. ಮಹೇಶ್, ಮಾಜಿ ಸಂಸದರಾದ ಡಾ. ಉಮೇಶ್ ಜಾಧವ್, ಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಅಧ್ಯಕ್ಷರು ಮತ್ತು ಶಾಸಕರಾದ ಸಿಮೆಂಟ್ ಮಂಜುನಾಥ್, ಮಾಜಿ ಸಂಸದರಾದ ಎಸ್. ಮುನಿಸ್ವಾಮಿ, ಎಸ್‌ಟಿ ಮೋರ್ಚಾ ರಾಜ್ಯ ಅಧ್ಯಕ್ಷರಾದ ಬಂಗಾರು ಹನುಮಂತು ಹಾಗೂ ಮತ್ತಿತರರು ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಸರ್ಕಾರಿ ಕಾಲೇಜಿನ ಪ್ರಾಂಶುಪಾಲರಾಗಿ ಕೆ.ತಿಮ್ಮಯ್ಯ ಅಧಿಕಾರ ಸ್ವೀಕಾರ



» **ಚಳ್ಳಕೆರೆ**

ಶೈಕ್ಷಣಿಕ ಪ್ರಗತಿಯಲ್ಲಿ ಉಪನ್ಯಾಸಕರ ಪಾತ್ರ ಅಧಿಕವಾಗಿದೆ. ವಿಶೇಷವಾಗಿ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಕಾರ್ಯ ಸುಲಭದ ಮಾತಲ್ಲ. ಆದರೂ ಪ್ರತಿಯೊಬ್ಬ ಉಪನ್ಯಾಸಕರು ವಿದ್ಯಾರ್ಥಿಗಳ ವಿಶ್ವಾಸವನ್ನು ಗಳಿಸಿ ಉತ್ತಮ ಬೋಧನೆ ಮಾಡಿದರೆ ಮಾತ್ರ ಆವಿದ್ಯಾರ್ಥಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ನಾವೆಲ್ಲರೂ ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುವ ಶಕ್ತಿಯಾಗಿ ಬೆಳೆಯೋಣವೆಂದು ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ನೂತನ ಪ್ರಾಂಶುಪಾಲ ಕೆ.ತಿಮ್ಮಯ್ಯ ತಿಳಿಸಿದರು. ಅವರು, ಜಿಲ್ಲೆಯ ತುರುವನೂರು ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸಿದ್ದು, ಚಳ್ಳಕೆರೆ ಕಾಲೇಜಿಗೆ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ಕರ್ತವ್ಯಕ್ಕೆ ಹಾಜರಾದ ಅವರನ್ನು ಉಪನ್ಯಾಸಕ ವರ್ಗ ಸ್ವಾಗತಿಸಿ, ಸನ್ಮಾನಿಸಿದರು. .ನಿರ್ವಗಮನ ಪ್ರಾಂಶುಪಾಲ ಎಂ.ರವೀಶ್ ಮಾತನಾಡಿ, ಪ್ರಾಂಶುಪಾಲನಾಗಿ ಈ ಕಾಲೇಜಿನಲ್ಲಿ ಉತ್ತಮ ಸೇವೆ ಸಲ್ಲಿಸಿದ ಹೆಮ್ಮೆ ಇದೆ. ಆದರೆ, ಗುಣಮಟ್ಟದ ಫಲಿತಾಂಶ ನೀಡಲು ಸಾಧ್ಯವಾಗಲಿಲ್ಲ. ಈ ಲೋಪವನ್ನು ಸರಿಪಡಿಸಿಕೊಂಡು ಉತ್ತಮ ಫಲಿತಾಂಶ ಪಡೆಯುವ ನಿಟ್ಟಿನಲ್ಲಿ ನೂತನ ಪ್ರಾಂಶುಪಾಲ ಕೆ.ತಿಮ್ಮಯ್ಯ ಯಶಸ್ವಿಯಾಗುವರು ಎಂಬ ವಿಶ್ವಾಸ ನನಗಿದೆ ಎಂದರು. ಪ್ರಭಾರ ಪ್ರಾಂಶುಪಾಲ ವಸಂತಕುಮಾರ್, ಜಿಲ್ಲಾ ರಸಾಯನಶಾಸ್ತ್ರ ವೇದಿಕೆ ಅಧ್ಯಕ್ಷ ಅಶ್ವತ್ಥರೆಡ್ಡಿ, ಪ್ರಾಚಾರ್ಯ ದೇವರಾಜ್, ನರಸಿಂಹಮೂರ್ತಿ, ವೇದಮೂರ್ತಿ, ಲೋಕೇಶಪ್ಪ, ಎಲ್‌ಐಸಿ ವೀರಭದ್ರಪ್ಪ, ಶಕೀಲ್‌ಆಹಮ್ಮದ್, ಬೆಳಗಟ್ಟ ನಾಗರಾಜು, ಹಬೀಬುಲ್ಲಾ, ಪುಷ್ಪಲತಾ, ಹೀನಾಕೌಸರ್ ಮುಂತಾದವರು ಉಪಸ್ಥಿತರಿದ್ದರು.

### ಬಹಿರಂಗ ಹರಾಜು

» **ದಾವಣಗೆರೆ**

ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕಚೇರಿ ವಾಹನ ಬುಲೆರೊ ಎಲ್‌ಎಕ್ಸ್ ಜೀಪ್ ಮಾಡಲ್ 2012 ನಿಷ್ಕ್ರಿಯವಾಗಿದ್ದು ಈ ವಾಹನವನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ನಂ.337/16ಎ-16 ಗಣೇಶ್ ಲೇಔಟ್ 1ನೇ ಕ್ರಾಸ್ ಪಿ.ಬಿ.ರಸ್ತೆ ದಾವಣಗೆರೆ ಇಲ್ಲಿ ಅಥವಾ ದೂ.ಸಂ.8050854033 ಗೆ ಸಂರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಅನಾಮಧೇಯ ಶವ ಪತ್ತೆ

» **ದಾವಣಗೆರೆ**

ಹರಿಹರ ನಗರದ ಹಳೆ ಹರ್ಲಾಪುರ ಪಕ್ಕದಲ್ಲಿರುವ ಗೌಡ್ರ ಹಾಲಪ್ಪನವರ ಜಮೀನಿನ ಪಕ್ಕದಲ್ಲಿರುವ ತುಂಗಾಭದ್ರ ನದಿಯ ದಡದಲ್ಲಿ ರುಂಡ, ಭುಜದಿಂದ ಎರಡೂ ಕೈಗಳೂ ಹಾಗೂ ಎರಡೂ ಕಾಲು ಪಾದಗಳು ಇಲ್ಲದ ಸಮಾರು 40 ರಿಂದ 45 ವರ್ಷದ ಮೃತ ದೇಹವು ಬೆಳಿಗ್ಗೆ 11.45 ಗಂಟೆಗೆ ಪತ್ತೆಯಾಗಿರುತ್ತದೆ. ಮೃತನ ಬಗ್ಗೆ ಮಾಹಿತಿ ಇರುವುದಿಲ್ಲ.

### ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ 5 ರಿಂದ 18 ವರ್ಷದೊಳಗಿನ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಹಾಗೂ 10,000 ಸಾವಿರ ನಗದು ಬಹುಮಾನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗೆ ಆಯ್ಕೆಯಾಗುವ ಮಕ್ಕಳು ಅಪ್ರತಿಮ ಪ್ರತಿಭೆಯುಳ್ಳವರಾಗಿರಬೇಕು, ಸಾಧನೆ ಅಸಾಧಾರಣವೆಂದು ಸಮರ್ಥಿಸಲು ಪೂರಕ ದಾಖಲೆಗಳನ್ನು ಸೆ.18 ರ ಒಳಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಉಪನಿರ್ದೇಶಕರ ಕಚೇರಿ, ಸರ್ಕಾರಿ ಬಾಲಕರ ಬಾಲಮಂದಿರ ಆವರಣ, ಎಂ.ಸಿ.ಸಿ. ಬಿ.ಬ್ಲಾಕ್ ಕುವೆಂಪು ನಗರ ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ 08192-264056 ಸಂಖ್ಯೆಗೆ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ರಾಜಾನಾಯ್ಕ್ ತಿಳಿಸಿದ್ದಾರೆ.

# ಓಬಣ್ಣನ ಹಳ್ಳಿ ಜಲಾವೃತ ಸ್ವಾಮೀಜಿ ಭೇಟಿ

» **ಚಿತ್ರದುರ್ಗ**

ತಾಲ್ಲೂಕಿನ ಓಬಣ್ಣನ ಹಳ್ಳಿಯಲ್ಲಿ ಇತ್ತಿಚೆಗೆ ಸುರಿದ ಮಳೆಯಿಂದಾಗಿ ಅಲ್ಲಿನ ಮನೆಗಳು ಮಳೆಯ ನೀರಿನಿಂದ ಜಲಾವೃತವಾಗಿದ್ದವು, ಇದರಿಂದ ಮನೆಯಲ್ಲಿ ನಿಲ್ಲಲು ಜಾಗ ವಿಲ್ಲದೆ ಜನತೆ ಪರದಾಡಿದರು ಮನೆಯಲ್ಲಿ ಇದ್ದ ಸಾಮಾನುಗಳು ಸಹಾ ನೀರಿನಲ್ಲಿ ಹೋಗಿದೆ ಇದನ್ನು ಮನಗಂಡ ಭೋವಿ ಗುರುಪೀಠ ಇಂದು ಸ್ಥಳಕ್ಕೆ ಭೇಟಿ ನೀಡುವುದರ ಮೂಲಕ ಅಲ್ಲಿನ ಜನತೆಯ ಸಂಕಷ್ಟಕ್ಕೆ ಮಿಡಿದು ಸಾಂತ್ವಾನ ಹೇಳುವುದರ ಮೂಲಕ ಆಹಾರ ಧಾನ್ಯಗಳ ಕಿಟ್‌ಗಳನ್ನು ವಿತರಣೆ ಮಾಡುವುದರ ಮೂಲಕ ಸಹಾಯವನ್ನು ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಮಾಡಿದ್ದಾರೆ.



ಚಿತ್ರದುರ್ಗ ತಾಲೂಕು. ಓಬಣ್ಣನಹಳ್ಳಿ ಸುತ್ತಾ-ಮುತ್ತಲೂ ಸಹಾ ಗುಡ್ಡದಿಂದ ಇತ್ತೀಚೆಗೆ ಬಿದ್ದ ಮಳೆಯಿಂದಾಗಿ ಅನೇಕ ಮನೆಗಳು ಜಲಾವೃತಗೊಂಡು ಹಾನಿಗೊಳಗಾಗಿವೆ. ಇದರಿಂದಾಗಿ ಅಲ್ಲಿನ ಜನ ಜೀವನ ಅಸ್ತವ್ಯಸ್ತವಾಗಿದೆ, ಈ ಮಳೆಯಿಂದಾಗಿ ಗ್ರಾಮದಲ್ಲಿನ ಮನೆಗಳು ಹಾನಿಯಾಗಿದ್ದು ಹಲವಾರು ಮನೆಗಳು ಪೂರ್ಣ ಪ್ರಮಾಣದಲ್ಲಿ ಹಾನಿಯಾಗಿವೆ, ಮಳೆಯ ದಿನದಂದು ಮನೆಯವರು ಪೂರ್ಣವಾಗಿ ನೀರಿನಿಂದ ಜಾಗರಣೆಯನ್ನು ಮಾಡಿದ್ದಾರೆ. ಈ ಸಂದರ್ಭದಲ್ಲಿ ಇಮ್ಮಡಿ ಶ್ರೀಗಳು ಮನೆಗಳನ್ನು ಪರಿಶೀಲಿಸಿದರು, ಮಳೆಯಿಂದ ಆದ ಅನಾಹುತವನ್ನು ಖುದ್ದಾಗಿ ವೀಕ್ಷಣೆ ಮಾಡಿದರು.

ತದ ನಂತರ ಮಾತನಾಡಿದ ಶ್ರೀಗಳು, ನಮ್ಮ ಜನತೆ ಸಂಕಟ ಬಂದಾಗ ಮಾತ್ರ ವೆಂಕಟರಮಣನನ್ನು ನೆನೆಯುತ್ತಾರೆ. ದೇವರೆ ಯಾಕೆ ನನಗೆ ಕಷ್ಟವನ್ನು ಕೊಟ್ಟೆ ನನ್ನ ಸಂಸಾರವನ್ನು ಯಾಕೆ ಬೀದಿಗೆ ತಂದೆ ಎಂದು ಪ್ರಶ್ನಿಸುತ್ತಿದ್ದಾರೆ. ಮಳೆ ಬಂದರು ಸಹಾ ನೀವುಗಳು ಧೃತಿಗೆಟ್ಟಿಲ್ಲ ಯಾಕೆಂದರೆ ನಿಮ್ಮ ಶಕ್ತಿಯನ್ನು ನೀವುಗಳು ನಂಬಿದ್ದಾರೆ ಇದರ ಮೇಲೆ ನಿಮಗೆ ನಂಬಿಕೆ ಇದೆ ಇದರಿಂದ ಇಂತಹ ತೊಂದರೆಗಳು ಬಂದರೂ ಸಹಾ ಧೃತಿಗೆಡದೆ ಧೈರ್ಯದಿಂದ ಸಮಸ್ಯೆಯನ್ನು ಎದುರಿಸಲಾಗುತ್ತಿದೆ. ನಿಮ್ಮದು ಶ್ರಮಿಕ ವರ್ಗವಾಗಿದೆ ದಿನ ಕಾಯಕವನ್ನು ಮಾಡುವುದರ ಮೂಲಕ ಬದುಕನ್ನು ಸಾಗಿಸಲಾಗುತ್ತಿದೆ. ಸರ್ಕಾರ ನಿಮ್ಮ ಸಹಾಯಕ್ಕೆ ಬರುತ್ತದೆ ಆದರೆ ಸ್ವಲ್ಪ ತಡವಾಗಬಹುದು ಅಲ್ಲಿಯವರೆಗೂ ಕಾಯದ ಮಳೆಯಿಂದ ಬಿದ್ದಿರುವ ನಿಮ್ಮ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳಿ ಎಂದು ಶ್ರೀಗಳು ಕರೆ ನೀಡಿದರು.

ನಿಮ್ಮ ಗ್ರಾಮ ಸುತ್ತಾ-ಮುತ್ತಾ ಗುಡ್ಡಗಾಡಿನ ಪ್ರದೇಶವಾಗಿದೆ ಮಳೆಯಿಂದ ಬಿದ್ದ ನೀರು ಪೂರ್ಣವಾಗಿ ಹರಿದು ಕೆಳಗಡೆ ಬರುತ್ತದೆ. ಈ ಹಿನ್ನಲೆಯಲ್ಲಿ ಮುಂದಿನ ದಿನಮಾನದಲ್ಲಿಯ ನಿಮ್ಮ ಮನೆಗಳು ಭದ್ರವಾಗಿ ಇರಬೇಕಾದರೆ ಎಲ್ಲಿ ನೀರು ಹರಿದು ಬರುತ್ತದೆ ಅಂತಹ ಸ್ಥಳದಲ್ಲಿ ಸುಭದ್ರವಾದ ತಡೆ ಗೋಡೆಯನ್ನು ನಿರ್ಮಾಣ ಮಾಡುವುದರ ಮೂಲಕ ನೀರು ಬಾರದಂತೆ ತಡೆಯಬೇಕಿದೆ ಎಂದ ಶ್ರೀಗಳು, ಮುಂದಿನ ದಿನದಲ್ಲಿ ಗ್ರಾಮವನ್ನು ನಿರ್ಮಾಣ ಮಾಡುವಾಗ ಸರಿಯಾದ ರೀತಿಯಲ್ಲಿ ವೈಜ್ಞಾನಿಕವಾಗಿ ನಿರ್ಮಾಣ ಮಾಡುವಂತಾಗಬೇಕಿದೆ. ಇದರಿಂದ ಮಳೆಯ ನೀರನ್ನು ತಡೆಯಬಹುದಾಗಿದೆ. ನಮ್ಮ ಮಠವು ಮಾನವೀಯತೆಯನ್ನು ಮಿಡಿಯುವ ಮಠವಾಗಿದೆ ಕಷ್ಟದಲ್ಲಿರುವವರೆಗೆ ಸಹಾಯ, ಸಹಕಾರವನ್ನು ನೀಡಲಾಗುವುದು ಎಂದು ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ತಿಳಿಸಿದರು.

ನೀವುಗಳು ದುಡಿದ ಗಳಿಸಿದ ಹಣವನ್ನು ಹೆಚ್ಚಿನ ಪ್ರಮಾಣದಲ್ಲಿ ಖರ್ಚು ಮಾಡದೇ ಗಳಿಕೆಯನ್ನು ಉಳಿಸಬೇಕು ಉಳಿಸಿದ ಗಳಿಕೆಯ ಹಣವನ್ನು ಈ ರೀತಿಯಾದ ಆಪತ್ಕಾಲದಲ್ಲಿ ಬಳಕೆಯನ್ನು ಮಾಡಕೊಳ್ಳಬೇಕಿದೆ ಆದರೆ ನಮ್ಮ ಜನಗಳಿಸುವುದಕ್ಕಿಂತ ಖರ್ಚು ಮಾಡುವುದು ಹೆಚ್ಚಾಗಿದೆ ಈ ರೀತಿಯ ಸಮಯದಲ್ಲಿ ಹಣ ಇಲ್ಲದೆ ಧೃತಿಗೆಡುತ್ತಾರೆ ಮುಂದಿನ ದಿನದಲ್ಲಿ ಈ ರೀತಿಯಾಗದಂತೆ ನೋಡಿಕೊಳ್ಳುವಂತೆ ಕಿವಿ ಮಾತು ಹೇಳಿದ ಶ್ರೀಗಳು, ಮುಂದಿನ ದಿನದಲ್ಲಿ ಶಾಸಕರು, ಜಿಲ್ಲಾಧಿಕಾರಿಗಳು ಬರಬಹುದು ನಾವು ಸಹಾ ಇಂದು ಬೆಳಿಗ್ಗೆ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿದ್ದೇನೆ ನೆರವು ನೀಡುವ ಭರವಸೆಯನ್ನು ನೀಡಿದ್ದಾರೆ ಎಂದು ಶ್ರೀಗಳು ತಿಳಿಸಿದರು.

ಜಿಲ್ಲಾ ಭೋವಿ ಸಂಘದ ಅಧ್ಯಕ್ಷ ಚಿಕ್ಕಂದವಾಡಿ ತಿಪ್ಪೇಸ್ವಾಮಿ ಮಾತನಾಡಿ, ಜನಾಂಗದಲ್ಲಿ ಒಗ್ಗಟ್ಟಿನ ಕೊರತೆ ಇದೆ. ಒಗ್ಗಟ್ಟಿನಿಂದ ಏನನ್ನು ಬೇಕಾದರೂ ಸಾಧಿಸಬಹುದು. ನಮ್ಮ ಧ್ವನಿ ವಿಧಾನಸೌಧವನ್ನು ನಡೆಸುವಂತಿರಬೇಕು,ಆಗ ನಮ್ಮ ಹಕ್ಕುಗಳನ್ನು ಪಡೆಯಲು ಸಾಧ್ಯವಾಗುತ್ತದೆ. ನೂರಾರು ಮನೆಗಳಿಗೆ ನೀರು ನುಗ್ಗಿದರು ಸಹ ಇದುವರೆಗೂ ರಾಜಕಾರಣಿಗಳು ಬಂದು ಸಾಂತ್ವನ ಹೇಳಿಲ್ಲ. ರಾಜಕಾರಣಿಗಳಿಗೆ ಜನರ ಸಮಸ್ಯೆಗಳನ್ನು ಆಲಿಸುವಾಗ ವ್ಯವಧಾನ ಇಲ್ಲ ಎಂದು ಹೇಳಿದರು.

ಮಾಜಿ ಜಿಲ್ಲಾಧ್ಯಕ್ಷ ತಿಮ್ಮಣ್ಣ ಮಾತನಾಡಿ, ನಮ್ಮ ಕಷ್ಟಕ್ಕೆ ಯಾವ ರಾಜಕಾರಣಿಯು ಆಗುವುದಿಲ್ಲ. ಮಠದ ಜೊತೆ ನಾವಿದ್ದರೆ. ಮಠ ನಮ್ಮನ್ನು ತಲೆ ಎತ್ತಿ ನಿಲ್ಲುವಂತೆ ಮಾಡುತ್ತದೆ. ಮಠದ ಕಾರ್ಯಕ್ರಮಗಳಿಗೆ ಸ್ವಯಂಘೋಷಿತವಾಗಿ, ಕುಟುಂಬ ಸಮೇತರಾಗಿ ಭಾಗವಹಿಸಬೇಕು ಎಂದು ಹೇಳಿದರು.

ಎಸ್ ಜೆ ಎಸ್ ಸಂಸ್ಥೆ ಕಾರ್ಯದರ್ಶಿ ಡಿಸಿ ಮೋಹನ್ ಮಾತನಾಡಿ, ಮಠದ ಶಾಲೆಯಲ್ಲಿ ಉಚಿತ ಶಿಕ್ಷಣ ವ್ಯವಸ್ಥೆ ಇರುವುದರಿಂದ ಬಡತನದಲ್ಲಿರುವ ಕುಟುಂಬದವರು ಮಕ್ಕಳನ್ನ ಕೂಲಿ ಕಳಿಸದೆ ಶಾಲೆಗೆ ಕಳಿಸಬೇಕು ಎಂದು ತಿಳಿಸಿದರು.

ಭೋವಿ ಗುರುಪೀಠದ ಸಿಇಓ ಗೌನಹಳ್ಳಿ ಗೋವಿಂದಪ್ಪ. ಗ್ರಾಮ ಪಂಚಾಯಿತಿ ಅಧ್ಯಕ್ಷ ಟಿ. ಉಮೇಶ್. ಪಿಡಿಓ ಆಂಜನೇಯ. ಗ್ರಾಮ ಪಂಚಾಯತಿ ಸದಸ್ಯ ಲಕ್ಷ್ಮಮ್ಮ. ಜಯಪ್ಪ. ಮುಖಂಡರಾದ ಚಂದ್ರಪ್ಪ ಯಲ್ಲಪ್ಪ. ಓಬಳೇಶ್ ಸೇರಿದಂತೆ ಮತ್ತಿತರರು ಭಾಗವಹಿಸಿದರು.

ಈ ಸಂದರ್ಭದಲ್ಲಿ ಅಕ್ಕಿ, ಬೇಳೆ, ರಾಗಿ, ಜೋಳ, ಖಾರದ ಪುಡಿ, ಉಪ್ಪು, ಸಕ್ಕರೆ, ಗೋಧಿ ಸೇರಿದಂತೆ ಸುಮಾರು 20 ವಿವಿಧ ರೀತಿಯ ದವಸ ಧಾನ್ಯಗಳನ್ನು ಒಳಗೊಂಡ ಕಿಟ್ ಗಳನ್ನು ಅಲ್ಲಿನ 120 ಜನರಿಗೆ ಹಂಚಿಕೆ ಮಾಡಲಾಯಿತು

# ಡಿ.ದೇವರಾಜ ಅರಸು ಜನ್ಮ ದಿನಾಚರಣೆ

## ನಾಡು ಕಂಡ ಸಾಮಾಜಿಕ ಪರಿವರ್ತನೆಯ ಹರಿಕಾರ, ಉಳುವವನಿಗೆ ಭೂ ಒಡೆತನ ನೀಡಿದ ಮಹಾನ್ ನಾಯಕ; ಡಾ; ಪ್ರಭಾ ಮಲ್ಲಿಕಾರ್ಜುನ್

» **ದಾವಣಗೆರೆ**

;ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಸಾಮಾಜಿಕಪರಿವರ್ತನೆಯಹರಿಕಾರ,ಹಿಂದುಳಿದ ವರ್ಗಗಳ ಧೀಮಂತ ನಾಯಕರಾಗಿದ್ದವರು ಡಿ.ದೇವರಾಜು ಅರಸು ಅವರು ಉಳುವವನಿಗೆ ಭೂ ಒಡೆತನವನ್ನು ನೀಡುವ ಮೂಲಕ ಭೂ ಸುಧಾರಣೆ ಕಾಯ್ದೆ ಜಾರಿಗೆ ತಂದರು ಎಂದು ಲೋಕಸಭಾ ಸದಸ್ಯರಾದ ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಮಂಗಳವಾರ ದಾವಣಗೆರೆ-ಹರಿಹರ ರಸ್ತೆಯಲ್ಲಿನ ರಾಯಣ್ಣ ಸರ್ಕಲ್ ಬಳಿ ಇರುವ ಡಿ. ದೇವರಾಜು ಅರಸುರವರ ಪ್ರತಿಮೆಗೆ ಮಲಾರ್ಪಣೆ ಮೂಲಕ ಗೌರವ ನಮನ ಸಲ್ಲಿಸಿ ನಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಸರ್ಕಾರಿ ನೌಕರರ ಸಮುದಾಯದಲ್ಲಿ ಆಯೋಜಿಸಲಾದ ಡಿ. ದೇವರಾಜು ಅರಸುರವರ 109ನೇ ಜನ್ಮ ದಿನಾಚರಣೆಯ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಅರಸುವರು ಮುಖ್ಯಮಂತ್ರಿಯಾಗಿ ಅನೇಕ ಸುಧಾರಣಾ ಕಾರ್ಯಕ್ರಮಗಳ ಜೊತೆಗೆ ಬಡ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿನಿಲಯಗಳ ಪರಿಕಲ್ಪನೆಯನ್ನು ರಾಜ್ಯಕ್ಕೆ ಕೊಟ್ಟಿದ್ದಾರೆ. ರಾಜಕೀಯ ವ್ಯವಸ್ಥೆಯಲ್ಲಿ ಆಡಳಿತವನ್ನು ಅತ್ಯುತ್ತಮವಾಗಿ ನಡೆಸುವ ಮೂಲಕ ಬಡವರು, ಹಿಂದುಳಿದ ಮತ್ತು ಅತ್ಯಂತ ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ವಿಶೇಷ ಗಮನ ನೀಡುವ ಮೂಲಕ ರಾಜ್ಯದ ಆಡಳಿತವನ್ನು ಮುನ್ನಡೆಸಿ ಅರಸು ಧ್ವನಿ ಇಲ್ಲದವರ ಧ್ವನಿಯಾದರು.

ಡಿ.ದೇವರಾಜ ಅರಸು ಅವರು ಮುಖ್ಯಮಂತ್ರಿಯಾದಾಗ ಭೂ ಸುಧಾರಣಾ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಉಳುವವನೇ ಭೂ ಒಡೆಯ ಎಂಬ ಯೋಜನೆ ತಂದರು. ವಿಧಾನಸೌಧದ ಮೆಟ್ಟಿಲು ಹತ್ತದವರನ್ನು ವಿಧಾನಸೌಧಕ್ಕೆ ಬರುವ ಹಾಗೆ ಮಾಡಿದರು, ಹಾಗೂ ಹಿಂದುಳಿದ ವರ್ಗದವರಿಗೆ ಮೀಸಲಾತಿ ಜಾರಿ ಮಾಡಿದರು.

ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಶೈಕ್ಷಣಿಕ ಅರಿವು ಸಾಲ, ಸ್ವ ಉದ್ಯೋಗಕ್ಕಾಗಿ ಮತ್ತು ಆರ್ಥಿಕ ಸ್ವಾವಲಂಭನೆಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಈ ವರ್ಗದ ಜನರ ಅಭಿವೃದ್ಧಿಗಾಗಿ ಅನೇಕ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದರು.

ಮಾಯಕೊಂಡ ಕ್ಷೇತ್ರ ಶಾಸಕರಾದ ಕೆ.ಎಸ್ ಬಸವಂತಪ್ಪ ಮಾತನಾಡಿ ಡಿ. ದೇವರಾಜು ಅರಸು ದಕ್ಷ ಆಡಳಿತಗಾರರಾಗಿ ಎಸ್.ಸಿ, .ಎಸ್.ಟಿ ಹಾಗೂ ಹಿಂದುಳಿದ ವರ್ಗದ ಏಳಿಗೆಗೆ ಪ್ರಾಮಾಣಿಕವಾಗಿ ಪ್ರಯತ್ನ ಮಾಡಿದರು. ನಾವುಗಳು ನಮ್ಮ ಅಕ್ಕ ಪಕ್ಕದ ಮನೆಯ ಮಕ್ಕಳಿಗೆ ಇಂತಹ ಮಹಾನ್ ವ್ಯಕ್ತಿಗಳ ಬಗ್ಗೆ ತಿಳಿಸಿ ಸಹಾಯ ಮಾಡಿದರೆ ಮುಂದೊಂದಿನ ಪ್ರತಿಯೊಂದು ಮನೆಯಲ್ಲೂ ಒಬ್ಬ ದೇವರಾಜು ಅರಸು, ಡಾ; ಬಿ.ಆರ್. ಅಂಬೇಡ್ಕರ್ ಅಂತಹ ಪ್ರತಿಭೆಗಳು, ಮಹಾನ್ ವ್ಯಕ್ತಿಗಳು ಹುಟ್ಟಿಕೊಳ್ಳುತ್ತಾರೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮಾತನಾಡಿ ಅರಸು ಅವರು ಜಾರಿಗೊಳಿಸಿದ ಯೋಜನೆಗಳಿಂದಾಗಿ ಅವರನ್ನು ಸದಾ ನೆನೆಯುತ್ತೇವೆ. ಆಡಳಿತ ಸಂದರ್ಭದಲ್ಲಿ ಸರ್ವ ಜನಾಂಗದವರನ್ನು ದೃಷ್ಟಿಯಲ್ಲಿಟ್ಟುಕೊಂಡು ಭೂ ಸುಧಾರಣೆ, ಜೀತ ಪದ್ಧತಿ, ಆರ್ಥಿಕ ಸಮಸಮಾಜಕ್ಕಾಗಿ ಕಾನೂನುಗಳನ್ನು ಜಾರಿಗೆ ತಂದಿದ್ದರಿಂದ ರಾಜ್ಯದ ಎಲ್ಲ ವರ್ಗದವರಿಗೆ ಅನುಕೂಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು. ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ಮಲ್ಲಿಕಾರ್ಜುನ್ ಕಲಮರಹಳ್ಳಿ ಉಪನ್ಯಾಸ ನೀಡಿದರು. ಬಿಸಿಎಂ ಅಧಿಕಾರಿ ಗಾಯತ್ರಿ ಕೆ.ಹೆಚ್. ಪ್ರಾಸ್ತವಿಕವಾಗಿ ಮಾತನಾಡಿದರು.

# ಮೀಸಲಾತಿ ಪ್ರಮಾಣ ಪತ್ರ ನೀಡದಂತೆ ಮನವಿ



» **ಚಳ್ಳಕೆರೆ**

ರಾಜ್ಯ ಸರ್ಕಾರ ನಗರಸಭೆ ಮತ್ತು ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಮೀಸಲಾತಿ ಇತ್ತೀಚೆಗೆ ಪ್ರಕಟಿಸಿದ್ದು, ಚಳ್ಳಕೆರೆ ನಗರಸಭೆಯ ಅಧ್ಯಕ್ಷ, ಉಪಾಧ್ಯಕ್ಷ ಮೀಸಲಾತಿಯಲ್ಲಿ ಅಧ್ಯಕ್ಷ ಸ್ಥಾನ ಬಿಸಿಎಂ(ಬಿ) ಮಹಿಳೆಗೆ ಮೀಸಲಿದ್ದು, ನಗರಸಭೆಯಲ್ಲಿ 21ನೇ ವಾರ್ಡ್‌ನ ಸದಸ್ಯೆ ಎಂ.ಸಾವಿತ್ರಮ್ಮ ಮಾತ್ರ ಏಕಮಾತ್ರ ಬಿಸಿಎಂ(ಬಿ) ಮೀಸಲಾತಿ ಇದ್ದು ಬಹುತೇಕ ಅಧ್ಯಕ್ಷ ಸ್ಥಾನ ಅವರಿಗೆ ಲಭಿಸುವ ಸಂಭವವಿದೆ.

ಆದರೆ, ನಗರಸಭೆಯ ಜೆಡಿಎಸ್ ಮತ್ತು ಬಿಜೆಪಿ ಚುನಾಯಿತ ಸದಸ್ಯರು ಪ್ರಸ್ತುತ ನಗರಸಭಾ ಸದಸ್ಯೆ ಎಂ.ಸಾವಿತ್ರಮ್ಮನವರಿಗೆ ಚುನಾವಣಾ ಉದ್ದೇಶಕ್ಕಾಗಿ ಬಿಸಿಎಂ(ಬಿ) ಪ್ರಮಾಣಪತ್ರವನ್ನು ನೀಡಬಾರದೆಂದು ಜೆಡಿಎಸ್ ಹಾಗೂ ಬಿಜೆಪಿ ಘಟಕ ತಹಶೀಲ್ದಾರ್‌ಗೆ ಲಿಖಿತ ಮೂಲಕ ಮನವಿ ಮಾಡಿದೆ.

ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ಮಾಹಿತಿ ನೀಡಿ, ರಾಜ್ಯ ಸರ್ಕಾರ ಬಿಸಿಎಂ(ಬಿ) ಮೀಸಲಾತಿಯನ್ನು ಕೆನೆಪದರ ಯೋಜನೆಯಡಿ ವಿತರಿಸಲು ಹಲವು ಷರತ್ತುಗಳನ್ನು ವಿಧಿಸಿ ಆದೇಶಿಸಿದೆ. ಆದರೆ, ಸದಸ್ಯರಾದ ಎಂ.ಸಾವಿತ್ರಮ್ಮ ಈ ಯೋಜನೆ ವ್ಯಾಪ್ತಿಗೆಸೇರ್ಪಡೆಯಾಗುವುದಿಲ್ಲ. ಆದ್ದರಿಂದ ಇವರಿಗೆ ಬಿಸಿಎಂ(ಬಿ) ಮೀಸಲಾತಿ ನೀಡಿದರೆ ಕಾನೂನು ಉಲ್ಲಂಘನೆಯಾಗುತ್ತದೆ ಎಂದು ತಿಳಿಸಿದ್ಧಾರೆ. ತಹಶೀಲ್ದಾರ್ ಪರವಾಗಿ ಮನವಿ ಸ್ವೀಕರಿಸಿದ ಶಿರಸ್ತೇದಾರ್ ಗಿರೀಶ್, ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಪರಿಶೀಲನೆಗೆ ಕಳಿಸಿಕೊಡುವ ಭರವಸೆ ನೀಡಿದರು.ಜೆಡಿಎಸ್ ನಗರಸಭಾ ಸದಸ್ಯ ಸಿ.ಶ್ರೀನಿವಾಸ್, ಹೊಯ್ಸಳಗೋವಿಂದ, ಸಿ.ಎಂ. ವಿಶುಕುಮಾರ್, ಪ್ರಮೋದ್, ಡಿ.ನಿರ್ಮಲ, ಕವಿತಾನಾಯಕಿ, ನಾಗಮಣಿ, ತಿಪ್ಪಮ್ಮ, ಬಿಜೆಪಿ ಸದಸ್ಯ ಟಿ.ಶಿವಕುಮಾರ್, ಪಾಲಮ್ಮ, ಸಾಕಮ್ಮ, ಬಿಜೆಪಿ ಮುಖಂಡ ಟಿ.ಮಂಜುನಾಥ, ಎಸ್.ಶ್ರೀಧರಚಾರ್ ಮನವಿ ಸಲ್ಲಿಸಿದರು.

## ಪ್ರಮುಖ ಸುದ್ದಿ

# ಧಾರ್ಮಿಕ ಚಿಂತನೆಗಳು ಸಮಾಜಕ್ಕೆ ಇಂದಿಗೂ ದಾರಿದೀಪ

» **ಚಳ್ಳಕೆರೆ**

ಸಮಾಜದ ಕಲ್ಯಾಣಕ್ಕಾಗಿ ಜ್ಞಾನಸುಧೆಯನ್ನು ಹರಿಸಿದಅನೇಕಮಹಾನೀಯರುಇಂದಿಗೂ ಸಹ ನಮಗೆ ಆದರ್ಶಪ್ರಾಯರಾಗಿದ್ದಾರೆ. ವಿಶೇಷವಾಗಿ ಅಂದಕಾರ ತುಂಬಿದ ಸಮಾಜಕ್ಕೆ 12ನೇ ಶತಮಾನ ಜ್ಞಾನ ಬೆಳಕು ನೀಡಿದ ಶತಮಾನ. ವಿಶೇಷವಾಗಿ ಅಂದಿನ ದಿನದಲ್ಲಿ ಜನರಿಗೆ ಧಾರ್ಮಿಕ ಜಾಗೃತಿ ಮೂಡಿಸಿದ ನುಲಿಯಚಂದ್ರಯ್ಯ ಹಾಗೂ ಬ್ರಹ್ಮಶ್ರೀನಾರಾಯಣಗುರು ಇಂದಿಗೂ ಸಮಾಜಕ್ಕೆ ಆದರ್ಶಪ್ರಾಯರು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಮಂಗಳವಾರ ತಾಲ್ಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ನುಲಿಯಚಂದ್ರಯ್ಯ, ಬ್ರಹ್ಮಶ್ರೀನಾರಾಯಣಗುರು ಮತ್ತು ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಜನ್ಮದಿನೋತ್ಸವ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ವಿಶೇಷವಾಗಿ ನಾಡಿನ ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಓಂಕಾರ ಬರೆದವರೇ ದಿವಂಗತ ಡಿ.ದೇವರಾಜಅರಸುರವರು. ಅವರು ಮುಖ್ಯಮಂತ್ರಿಯಾಗಿದ್ದಾಗ ಮೈಸೂರು ರಾಜ್ಯ ಕರ್ನಾಟಕ ರಾಜ್ಯವಾಯಿತು. ಹಿಂದುಳಿದ ವರ್ಗಗಳ ಆಯೋಗವನ್ನು ರಚಿಸಿ ಆ ಸಮುದಾಯದ ಅಭಿವೃದ್ಧಿಗೆ ಪ್ರೇರಕ ಶಕ್ತಿಯಾಗಿ ನಿಂತವರು ಅರಸುರವರು ಎಂದರು.



ಕಾರ್ಯಕ್ರಮದಲ್ಲಿ ತಾಲ್ಲೂಕು ಈಡಿಗ ಸಮಾಜದ ಅಧ್ಯಕ್ಷ ರವಿಕುಮಾರ್, ಸಮುದಾಯದ ಮುಖಂಡರಾದ ಕೆ.ಜೆ. ಅಶೋಕ್‌ಕುಮಾರ್, ನಗರಸಭಾ ಸದಸ್ಯರಾದ ಮಲ್ಲಿಕಾರ್ಜುನ್, ಎಂ.ಜೆ. ರಾಘವೇಂದ್ರ, ಕೆ.ವೀರಭದ್ರಪ್ಪ, ಕವಿತಾಬೋರಯ್ಯ, ನಾಮಿನಿ ಸದಸ್ಯ ನೇತಾಜಿಪ್ರಸನ್ನ, ಬಡಗಿಪಾಪಣ್ಣ, ಆರ್.ವೀರಭದ್ರಪ್ಪ, ಅನ್ವರ್‌ಮಾಸ್ಟರ್, ಪೌರಾಯುಕ್ತರ ಜಗರೆಡ್ಡಿ, ಇಓ ಎಚ್.ಶಶಿಧರ, ಶಿರಸ್ಥೇದಾರ್ ಸದಾಶಿವಪ್ಪ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T